ವಿಜಯಪುರ | ಸಂಪುಟ 04 | ಸಂಚಿಕೆ 152 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily ಜನಪರ-ಜೀವಪರ ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ Editor: Indushekhar Manur

editor.udayarashmi@gmail.com RNI NO: KARKAN/2023/86203 ಶುಕ್ರವಾರ, ಆಗಸ್ಟ್, 07, 2026

" ಡಮ್ಮಿ ಸಿಎಂ ಡಿಕೆ ಶಿವಕುಮಾರ್ ಅವರೇ, ಪೇಮೆಂಟ್ ಕೋಟಾ ಸಚಿವರಿಗೆ ಖಾತೆ ಹಂಚಲು ಹೈಕಮಾಂಡ್ ಅನುಮತಿಗಾಗಿ ಕಾಯುತ್ತಿದ್ದೀರೋ? ಅಥವಾ ನಿಗದಿಯಾದ ಪೇಮೆಂಟ್ ಇನ್ನೂ 'ಖಾತೆ'ಗೆ (Ac-count) ಜಮಾ ಆಗಿಲ್ಲವೆಂದು ತಡೆ ಹಿಡಿದಿದ್ದೀರೋ?"



■ ಆರ್. ಅಶೋಕ್
ವಿಧಾನಸಭೆ ವಿರೋಧಪಕ್ಷದ ನಾಯಕರು



**ಕೆರೆ ಪುನಶ್ಚೇತನ ಕಾಮಗಾರಿ ಭೇಟಿ ವೇಳೆ ವಿಜಯಪುರ ಸಿಇಒ ರಿಷಿ ಆನಂದ ಸೂಚನೆ**

# ವಿಬಿ–ಜಿ ರಾಮ್–ಜಿ ಯೋಜನೆಯಡಿ ಕಾರ್ಮಿಕರಿಗೆನಿರಂತರ ಉದ್ಯೋಗ ಕಲ್ಪಿಸಿ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ವಿಬಿ–ಜಿ ರಾಮ್–ಜಿ ಯೋಜನೆಯಡಿ ಗ್ರಾಮೀಣ ಕಾರ್ಮಿಕ–ರಿಗೆ ನಿರಂತರ ಉದ್ಯೋಗ ಕಲ್ಪಿಸುವುದರ ಜೊತೆಗೆ ಕಾಮಗಾರಿ ಸ್ಥಳಗಳಲ್ಲಿ ಅಗತ್ಯ ಮೂಲ ಸೌಕರ್ಯಗಳನ್ನು ಕಡ್ಡಾಯವಾಗಿ ಒದಗಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಿಷಿ ಆನಂದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ತಾಲೂಕಿನ ನಾಗಠಾಣ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ವಿಬಿ–ಜಿ ರಾಮ್–ಜಿ ಯೋಜನೆಯಡಿ ಕೈಗೊಳ್ಳಲಾಗುತ್ತಿರುವ ಕೆರೆ ಪುನಶ್ಚೇತನ ಕಾಮಗಾರಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು, ಕಾಮಗಾರಿಯ ಪ್ರಗತಿ, ಗುಣಮಟ್ಟ, ಕಾರ್ಮಿಕರ ಹಾಜರಾತಿ ಹಾಗೂ ಮಾನವ ದಿನಗಳ ಸೃಜನೆ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದರು.

ಬಳಿಕ ಮಾತನಾಡಿದ ಅವರು, ಕುಡಿಯುವ ನೀರು, ನೆರಳಿನ ವ್ಯವಸ್ಥೆ, ಪ್ರಥಮ ಚಿಕಿತ್ಸಾ ಸೌಲಭ್ಯ ಸೇರಿದಂತೆ ಎಲ್ಲ ಮೂಲಭೂತ ಸೌಲಭ್ಯಗಳನ್ನು ಸಮರ್ಪಕವಾಗಿ ಕಲ್ಪಿಸಬೇಕು. ಕಾರ್ಮಿಕರ ಕೂಲಿ ಪಾವತಿಯಲ್ಲಿ ಯಾವುದೇ ತಾಂತ್ರಿಕ ತೊಂದರೆ ಉಂಟಾಗದಂತೆ ಕ್ರಮವಹಿಸಬೇಕು. ಎಲ್ಲ ಕಾರ್ಮಿಕರ ಫೇಸ್ ಅಥೆಂಟಿಕೇಶನ್ ಕಡ್ಡಾಯವಾಗಿ ಪೂರ್ಣಗೊಳಿಸಿ, ನಿರಂತರ ಉದ್ಯೋಗ ಕಲ್ಪಿಸುವ ಮೂಲಕ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕು ಎಂದು ಸೂಚಿಸಿದರು. ಈ ಯೋಜನೆಯಡಿ ಗ್ರಾಮೀಣ ಕುಟುಂಬಗಳಿಗೆ ವರ್ಷಕ್ಕೆ 125 ದಿನಗಳ ಉದ್ಯೋಗ ಹಾಗೂ ಪ್ರತಿ ದಿನ 382 ರೂ. ಕೂಲಿ ನೀಡಲಾಗುತ್ತಿದೆ. ಕೃಷಿ ಹೊಂಡ,ದನಗಳ ಶೆಡ್, ಮೇಕೆ ಶೆಡ್, ತೋಟಗಾರಿಕೆ ಅಭಿವೃದ್ಧಿ ಸೇರಿದಂತೆ ಹಲವು ವೈಯಕ್ತಿಕ ಕಾಮಗಾರಿಗಳಿಗೂ ಅವಕಾಶವಿದ್ದು, ಗ್ರಾಮೀಣ ಕುಟುಂಬಗಳು ಈ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದರು.

ವಿಜಯಪುರ ತಾಲೂಕಿನ ಎಲ್ಲ ಗ್ರಾಮ ಪಂಚಾಯಿತಿಗಳಲ್ಲಿ ಕನಿಷ್ಠ 100 ಕಾರ್ಮಿಕ–ರಿಗೆ ನಿರಂತರ ಉದ್ಯೋಗ ಕಲ್ಪಿಸಿ, ನಿಗದಿತ ಗುರಿಗೆ ಅನುಗುಣವಾಗಿ ಮಾನವ ದಿನಗಳ ಸೃಜನೆ ಸಾಧಿಸಬೇಕು. ಯೋಜನೆಯಡಿ ಉದ್ಯೋಗ ಬಯಸಿದವರು ಉದ್ಯೋಗದಿಂದ ವಂಚಿತವಾಗಬಾರದು.

ಗ್ರಾಮ ಮಟ್ಟದಲ್ಲಿ ಮನೆ ಮನೆಗೆ ತೆರಳಿ ಯೋಜನೆಯ ಕುರಿತು ವ್ಯಾಪಕ ಜಾಗೃತಿ ಮೂಡಿಸಿ, ಉದ್ಯೋಗ ಬಯಸುವ ಎಲ್ಲ ಕುಟುಂಬಗಳನ್ನು ಕಾಮಗಾರಿಗಳಲ್ಲಿ ಸಕ್ರಿಯವಾಗಿ ತೊಡಗಿಸಬೇಕು ಎಂದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಗುರುಶಾಂತಪ್ಪ ಬೆಳ್ಳುಂಡಗಿ, ಸಹಾಯಕ ನಿರ್ದೇಶಕ ಎಸ್. ಆರ್. ಕಟ್ಟಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ ನಾಮದೇವ ಶಿಂಧೆ, ಜಿಲ್ಲಾ ಐಇಸಿ ಸಂಯೋಜಕಿ ಸುವರ್ಣ ಭಜಂತ್ರಿ, ಉಪ ಪ್ರಾಂಶುಪಾಲ ಬಿ.ಎಂ. ಕೊಪ್ಪದ, ತಾಂತ್ರಿಕ ಸಂಯೋಜಕ ಪರಶುರಾಮ ಶಹಾಪುರ, ಐಇಸಿಯ ರಾಘವೇಂದ್ರ ಭಜಂತ್ರಿ, ತಾಂತ್ರಿಕ ಸಹಾಯಕ ಮಂಜುನಾಥ ಶಟಗಾರ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ, ಬಿಎಫ್‌ಟಿ ಸಿಬ್ಬಂದಿ ಹಾಗೂ ವಿವಿಧ ಇಲಾಖೆಗಳ ಅಧಿಕಾ–ರಿಗಳು ಉಪಸ್ಥಿತರಿದ್ದರು.

## ಹಸಿರು ಸೇನೆ ಯುವ ಘಟಕದ ಅಧ್ಯಕ್ಷರಾಗಿ ಪ್ರಶಾಂತ ಆಯ್ಕೆ

■ ಉದಯರಶ್ಮಿ ದಿನಪತ್ರಿಕೆ



ಆಲಮೇಲ: ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಸಿಂದಗಿ ತಾಲೂಕಿನ ಯುವ ಘಟಕದ ನೂತನ ಅಧ್ಯಕ್ಷರಾಗಿ ದೇವಣಗಾಂವ ಗ್ರಾಮದ ಯುವಕ ಪ್ರಶಾಂತ ಶಿವಯೋಗೆಪ್ಪ ಭೂಸನೂರ ರವರನ್ನು ಆಯ್ಕೆ ಮಾಡಲಾಗಿದೆ ರಾಜ್ಯ ಗೌರವಾಧ್ಯಕ್ಷರಾದ ಶಶಿಕಾಂತ ಗುರೂಜಿಯವರು ಮತ್ತು ಚೂನ್ನಪ್ಪ ಪೂಜಾರಿ ಹಾಗೂ ಯುವ ಘಟಕದ ರಾಜ್ಯಾಧ್ಯಕ್ಷ ನೀತಿನ ವ್ಯಾಕೇರಿ ಮತ್ತು ಜಿಲ್ಲಾಧ್ಯಕ್ಷರಾದ ಸಂಗಮೇಶ ಸಗರ ರವರ ನೇತೃತ್ವದಲ್ಲಿ ಸಿಂದಗಿ ತಾಲೂಕ ಯುವ ಘಟಕದ ಅಧ್ಯಕ್ಷರಾಗಿ ಆಯ್ಕೆ ಮಾಡಲಾಗಿದೆ.

ಈ ಸಂದರ್ಭದಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ರಾಮನಗೌಡ ಪಾಟೀಲ್, ಕವಿರಾಜ ಲಾಳಸಂಗಿ, ಪ್ರವೀಣ ಭೂಸನೂರ, ಸಂತೋಷ ಪೂಜಾರಿ, ರಘು ಇತರೆ ರೈತ ಮುಖಂಡರು ಉಪಸ್ಥಿತರಿದ್ದರು.

**ತಂದೆ ಕೊಟ್ಟ 14 ಮಂದಿಯ ಪಟ್ಟಿಯಲ್ಲಿ ಹೆಚ್ ಸಿ ಮಹದೇವಪ್ಪನವರ ಹೆಸರೂ ಇತ್ತು । ಸಚಿವ ಸ್ಥಾನ ಅವರ ಕೈತಪ್ಪಿದ್ದಕ್ಕೆ ತಂದೆ ಕಾರಣರಲ್ಲ । ಸಚಿವ ಯತೀಂದ್ರ ಸಿದ್ದರಾಮಯ್ಯ ಸ್ಪಷ್ಟನೆ**

# ತಂದೆ ಸಿಎಂ ಸ್ಥಾನ ತೊರೆದಿದ್ದರಿಂದ ನನಗೆ ಸಚಿವ ಸ್ಥಾನ

ಮೈಸೂರು: ಮಾಜಿ ಸಚಿವ ಹೆಚ್‌ಸಿ ಮಹದೇವಪ್ಪಗೆ ಈ ಬಾರಿ ಸಚಿವ ಸ್ಥಾನ ಕೈತಪ್ಪಿದ ಬಗ್ಗೆ ಮಾಧ್ಯಮ ಪ್ರತಿನಿಧಿಗಳಿಗೆ ಪ್ರತಿಕ್ರಿಯೆ ನೀಡಿದ ನಗರಾಭಿವೃದ್ಧಿ ಮತ್ತು ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ ಯತೀಂದ್ರ ಸಿದ್ದರಾಮಯ್ಯ, ಮಹದೇವಪ್ಪ ಹೆಸರನ್ನು ಸಿದ್ದರಾಮಯ್ಯ ಸಚಿವರ ಪಟ್ಟಿಯಲ್ಲಿ ಶಿಫಾರಸು ಮಾಡಿದ್ದರು. ಆದ–'ರೆ, ಹೈಕಮಾಂಡ್ ಈ ಬಾರಿ ಹೊಸ ಮುಖವಾಗಿ ನರೇಂದ್ರ ಸ್ವಾಮಿ ಅವರನ್ನು ಆಯ್ಕೆ ಮಾಡಿದೆ ಎಂದು ಸ್ಪಷ್ಟಪಡಿಸಿದರು.

ಹಿರಿಯರಾದ ಮಹದೇವಪ್ಪ ಮತ್ತು ತನ್ವೀರ್ ಸೇಠ್ ಅವರ ಮನವೊಲಿಸುವ ಕಾರ್ಯವನ್ನು ಪಕ್ಷದ ವರಿಷ್ಠರು ಮಾಡಿದ್ದಾರೆ. ಕುರುಬ ಸಮುದಾಯದ ಅಸಮಾಧಾನದಿಂದಾಗಿ ಮತ್ತು ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ ಸ್ಥಾನ ಬಿಟ್ಟಿದ್ದರಿಂದ ತನಗೆ ಸಚಿವ ಸ್ಥಾನ ಲಭಿಸಿತು ಎಂದು ಕೂಡ ಹೇಳಿದ್ದಾರೆ.

ನೂತನವಾಗಿ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರಾಗಿ ನೇಮಕಗೊಂಡ ಯತೀಂದ್ರ ಸಿದ್ದರಾಮಯ್ಯ, ತಮ್ಮ ಜಿಲ್ಲಾ ಉಸ್ತುವಾರಿ ಸ್ಥಾನ ಮತ್ತು ಸಚಿವ ಸಂಪುಟ ವಿಸ್ತರಣೆ ಕುರಿತು ಪ್ರತಿಕ್ರಿಯಿಸಿದ್ದಾರೆ.



"ಈ ದೇಶ ಹಿಂದೂ ರಾಷ್ಟ್ರವಾದರೆ ಜಾತಿ ವ್ಯವಸ್ಥೆ ಮತ್ತೆ ಬರುತ್ತದೆ, ಹಿಂದುತ್ವವಾದಿಗಳು ಮನುಸ್ಮೃತವಾದಿಗಳಲ್ಲಿರುವ ಸಾಮಾಜಿಕ ವ್ಯವಸ್ಥೆಯನ್ನು ವಾಪಸ್ ತರುತ್ತಾರೆ."

■ ಡಾ.ಯತೀಂದ್ರ ಸಿದ್ದರಾಮಯ್ಯ
ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರು

ಬರ ಪೀಡಿತ ಪ್ರದೇಶಗಳ ಪರಿಶೀಲನೆಗಾಗಿ ಮುಖ್ಯಮಂತ್ರಿಗಳ ಸೂಚನೆಯಂತೆ ಮೈಸೂರಿಗೆ ಭೇಟಿ ನೀಡಿರುವ ಅವರು, ಮೊದಲು ಉರುಲಿಂಗ ಪೆದ್ದಿ ಮಠ ಹಾಗೂ ಸುತ್ತೂರು ಮಠಕ್ಕೆ ಭೇಟಿ ನೀಡಿ ಸ್ವಾಮೀಜಿಗಳ ಆಶೀರ್ವಾದ ಪಡೆದರು. ಈ ಹಿಂದೆ ತಾತ್ಕಾಲಿಕವಾಗಿ ಮೈಸೂರು ಉಸ್ತುವಾರಿ ಜವಾಬ್ದಾರಿ ವಹಿಸಿಕೊಂಡಿದ್ದ ಯತೀಂದ್ರ, ಈಗ ಅಧಿಕೃತವಾಗಿ ಸ್ಥಾನ ಖಚಿತವಾಗಿರುವ ಕಾರಣ ಮಠಗಳಿಗೆ ಭೇಟಿ ನೀಡಿರುವುದಾಗಿ ಹೇಳಿದರು.

ಅಸಮಾಧಾನಗೊಂಡಿರುವ ಹಿರಿಯ ನಾಯಕರನ್ನು ನಮ್ಮ ವರಿಷ್ಠರು ಹೋಗಿ ಭೇಟಿ ಮಾಡಿದ್ದಾರೆ. ಹಾಗಾಗಿ ಭಿನ್ನಮತ ಶಮನವಾಗಲಿದೆ ಎಂದರು.

**ಸ್ಥಳ ಬದಲಾವಣೆಗೆ ಸಾರ್ವಜನಿಕರ ಆಗ್ರಹ । ಸ್ಥಳ ಬದಲಾವಣೆ ಪ್ರಶ್ನೆಯೇ ಇಲ್ಲ" ಎಂದ ಕಾರ್ಯದರ್ಶಿ ಔರಂಗಾಬಾದ**

# ಎಪಿಎಂಸಿ ಹೈಟೆಕ್ ಶೌಚಾಲಯ ನಿರ್ಮಾಣ ಸ್ಥಳಕ್ಕೆ ತೀವ್ರ ವಿರೋಧ

■ ಉದಯರಶ್ಮಿ ದಿನಪತ್ರಿಕೆ

ಚಡಚಣ: ಪಟ್ಟಣದ ಎಪಿಎಂಸಿ ಉಪಮಾರುಕಟ್ಟೆ ಪ್ರಾಂಗಣದಲ್ಲಿ ನಿರ್ಮಾಣಗೊಳ್ಳುತ್ತಿರುವ ಸುಮಾರು ಮೂರುಕೋಟಿ(3ಕೋಟಿ)ರೂಪಾಯಿಗಳ ವಿವಿಧ ಕಾಮಗಾರಿಗಳ ಕ್ಯಾಂಟೀನ್, ಗೋಡವಾನ್ ನಿರ್ಮಾಣ,ನಾಲ್ಕು ವ್ಯಾಪಾರ ಮಳಿಗೆ, ಹೈಟೆಕ್ ಆಫೀಸ್ ಹಾಗೂ ಶೌಚಾಲಯಗಳ ಕಟ್ಟಡ ಕಾಮಗಾರಿಗಳಿಗೆ ಮಂಜುರಾತಿ ದೊರೆತಿದ್ದು ಶೀಘ್ರದಲ್ಲಿಯೆ ಕಾಮಗಾರಿ ನಡೆಯಲಿದೆ ಎಂದು ಕಾರ್ಯದರ್ಶಿ ಐ.ಎಸ್.ಔರಂಗಾಬಾದ ಅವರು ಚಡಚಣದ ಎಪಿಎಮ್‌ಸಿ ಯಲ್ಲಿ ಹೇಳಿದರು.



ಚಡಚಣ ಎಪಿಎಮ್‌ಸಿ ಉಪಮಾರುಕಟ್ಟೆಯ ಒಟ್ಟು ಜಾಗ 7 ಎಕರೆ 10 ಗುಂಟೆ ಇದ್ದು ಈಗ ಕೇವಲ 6 ಎಕರೆ 20 ಗುಂಟೆ ಜಾಗ ಮಾತ್ರ ಲಭ್ಯವಿದೆ ಎಂದು ತಮ್ಮ ಅಳಲನ್ನು ಪತ್ರಕರ್ತರ ಮುಂದೆ ತೋಡಿಕೊಂಡರು.

ಹೈಟೆಕ್ ಶೌಚಾಲಯದ ಸ್ಥಳ ಆಯ್ಕೆ ವಿವಾದಕ್ಕೆ ಕಾರಣವಾಗಿದ್ದು, ಸಾರ್ವಜನಿಕರ ವಾಸದ ಮನೆಗಳಿಗೆ ಹೊಂದಿಕೊಂಡಿರುವ ಪ್ರದೇಶದಲ್ಲಿ ಶೌಚಾಲಯ ನಿರ್ಮಿಸಲು ಮುಂದಾಗಿರುವ ಕ್ರಮಕ್ಕೆ ಸ್ಥಳೀಯ ನಿವಾಸಿಗಳು ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಆರೋಗ್ಯ, ಪರಿಸರ ಹಾಗೂ ಸ್ವಚ್ಛತೆಯ ದೃಷ್ಟಿಯಿಂದ ಈ ಸ್ಥಳ ಸೂಕ್ತವಲ್ಲ ಎಂದು ಅಭಿಪ್ರಾಯಪಟ್ಟಿರುವ ನಿವಾಸಿಗಳು, ಯಾರಿಗೂ ತೊಂದರೆಯಾಗದ ಪರ್ಯಾಯ ಸ್ಥಳದಲ್ಲಿ ಶೌಚಾಲಯ ನಿರ್ಮಿಸುವಂತೆ ಎಪಿಎಂಸಿ ಕಾರ್ಯದರ್ಶಿ ಐ.ಎಸ್.ಔರಂಗಾಬಾದ ಹಾಗೂ ಆಡಳಿತವನ್ನು ಒತ್ತಾಯಿಸಿದ್ದಾರೆ. ಎಪಿಎಂಸಿ ಉಪಮಾರುಕಟ್ಟೆ ಪ್ರಾಂಗಣ–ಕ್ಕೆ ಹೊಂದಿಕೊಂಡಿರುವ ನಿವಾಸಿಗಳ ಪ್ರಕಾರ ಮತ್ತು ನಿಲೇಶ ಸಿಂಗ್ ಹಜೇರಿ ಅವರು ಮಾತನಾಡಿ, ಪ್ರಸ್ತುತ ಆಯ್ಕೆ ಮಾಡಿರುವ ಸ್ಥಳದ ಪಕ್ಕದಲ್ಲೇ ಹಲವು ಕುಟುಂಬಗಳು ಸುಮಾರು ವರ್ಷಗಳಿಂದ ವಾಸಿಸುತ್ತಿವೆ. ಈಗಾಗಲೇ ಆ ಭಾಗದಲ್ಲಿ ಸಮರ್ಪಕ ಚರಂಡಿ ವ್ಯವಸ್ಥೆ ಇಲ್ಲ. ಇಂತಹ ಪರಿಸ್ಥಿತಿಯಲ್ಲಿ ಶೌಚಾಲಯದ ಮಲಿನ ನೀರನ್ನು ಚರಂಡಿಗೆ ಸಂಪರ್ಕಿಸಿದರೂ ಅಥವಾ ಇಂಗುಬಚ್ಚಲು (ಸೋಕ್ ಪಿಟ್) ನಿರ್ಮಿಸಿದರೂ ಕಾಲಕ್ರಮೇಣ ದುರ್ವಾಸನೆ, ನೈರ್ಮಲ್ಯ ಸಮಸ್ಯೆ ಹಾಗೂ ಸೊಳ್ಳೆಗಳ ಕಾಟ ಹೆಚ್ಚುವ ಸಾಧ್ಯತೆ ಇದೆ. ಇದರಿಂದ ಸುತ್ತಮುತ್ತಲಿನ ನಿವಾಸಿಗಳು ಆರೋಗ್ಯ ಸಮಸ್ಯೆ ಎದುರಿಸಬೇಕಾಗುತ್ತದೆ ಎಂದು ಅವರು ಆತಂಕ ವ್ಯಕ್ತಪಡಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ನಿವಾಸಿಗಳು ಜು.27 ರಂದು ಸಲ್ಲಿಸಿದ ಮನವಿ ಹಿನ್ನೆಲೆಯಲ್ಲಿ ಮಂಗಳವಾರ ಸ್ಥಳಕ್ಕೆ ಭೇಟಿ ನೀಡಿದ ಎಪಿಎಂಸಿ ಕಾರ್ಯದರ್ಶಿ ಐ.ಎಸ್. ಔರಂಗಬಾದ್ ಅವರು ಸಾರ್ವಜನಿಕರ ಆಕ್ಷೇಪವನ್ನು ತಳ್ಳಿ ಹಾಕಿದರು. "ಶೌಚಾಲಯ ನಿರ್ಮಾಣಕ್ಕೆ ನಮ್ಮ ಇಂಜಿನಿಯರ್‌ಗಳು ತಾಂತ್ರಿಕವಾಗಿ ಸೂಕ್ತ ಸ್ಥಳವನ್ನು ಈಗಾಗಲೇ ಗುರುತಿಸಿದ್ದಾರೆ. ಕಾಮಗಾ–ರಿಗೆ ಸಂಬಂಧಿಸಿದ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದ್ದು, ಗುತ್ತಿಗೆದಾರರಿಗೂ ಕಾಮಗಾರಿ ವಹಿಸಲಾಗಿದೆ. ಇದು ಎಪಿ–ಎಂಸಿಯ ಸ್ವಂತ ಜಾಗವಾಗಿದ್ದು, ಯಾವ ಸ್ಥಳದಲ್ಲಿ ನಿರ್ಮಾಣ ಮಾಡಬೇಕು ಎಂಬುದನ್ನು ನಿರ್ಧರಿಸುವ ಅಧಿಕಾರ ಎಪಿ–ಎಂಸಿಗೇ ಇದೆ" ಎಂದು ಸ್ಪಷ್ಟಪಡಿಸಿದರು.

ಅಲ್ಲದೆ, "ಈ ಕಾಮಗಾರಿಗೆ ಪಟ್ಟಣ ಪಂಚಾಯಿತಿ, ವಾಯುಮಾಲಿನ್ಯ ನಿಯಂತ್ರಣ ಮಂಡಳಿ ಅಥ–'ವಾ ಇತರ ಯಾವುದೇ ಇಲಾಖೆಯ ಅನುಮತಿ ಪಡೆಯುವ ಅಗತ್ಯವಿಲ್ಲ. ಹೀಗಾಗಿ ಶೌಚಾಲಯವನ್ನು ಬೇರೆ ಸ್ಥಳಕ್ಕೆ ಸ್ಥಳಾಂತರಿಸುವ ಪ್ರಶ್ನೆಯೇ ಉದ್ಭವಿಸುವುದಿಲ್ಲ" ಎಂದು ಅವರು ಖಡಾಖಂಡಿತವಾಗಿ ತಳ್ಳಿಹಾಕಿದರು. ಆದ–'ರೆ ಎಪಿಎಂಸಿ ಆಡಳಿತದ ಈ ನಿಲುವಿನಿಂದ ಅಸಮಾಧಾನಗೊಂಡಿರುವ ಸ್ಥಳೀಯರು, ಸಾರ್ವಜನಿಕರ ಆರೋಗ್ಯ ಹಾಗೂ ಪರಿಸರದ ಹಿತಾಸಕ್ತಿಗೆ ಆದ್ಯತೆ ನೀಡಿ ನಿರ್ಧಾರವನ್ನು ಮರುಪರಿಶೀಲಿಸಬೇಕು ಎಂದು ಪುನಃ ಆಗ್ರಹಿಸಿದರಲ್ಲದೆ, ಜಿಲ್ಲಾಧಿಕಾರಿಗಳು ಮಧ್ಯಸ್ಥಿಕೆ ವಹಿಸಿ ಸಮಸ್ಯೆಯನ್ನು ಬಗೆಹರಿಸುವಂತೆ ಮನವಿ ಮಾಡಿದರು. ಈ ವಿವಾದ ಮುಂದಿನ ದಿನಗಳಲ್ಲಿ ಯಾವ ತಿರುವು ಪಡೆಯಲಿದೆ ಎಂಬುದು ಕುತೂಹಲ ಮೂಡಿಸಿದೆ.

ಈ ಸಂದರ್ಭದಲ್ಲಿ ಅರವಿಂದ ಗಡ್ಡದೇವರಮಠ ಹಾಗೂ ಸ್ಥಳೀಯರು, ಎಪಿಎಮ್‌ಸಿ ಸಿಬ್ಬಂದಿ ಇತರರು ಇದ್ದರು.

**ಬಸರಕೋಡ ಬಸವೇಶ್ವರ ದೇವಸ್ಥಾನ ಕಳ್ಳತನ ಪ್ರಕರಣ ಭೇದಿಸಿದ ವಿಜಯಪುರ ಪೊಲೀಸರು । ಗುಜರಾತ್, ರಾಜಸ್ಥಾನದ ಮೂವರು ಆರೋಪಿಗಳ ಬಂಧನ**

# 52.70 ಲಕ್ಷ ಮೌಲ್ಯದ ಬೆಳ್ಳಿ ಮೂರ್ತಿ ಹಾಗೂ ವಸ್ತುಗಳ ವಶ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲೆಯ ಮುದ್ದೇಬಿಹಾಳ ತಾಲೂಕಿನ ಬಸರಕೋಡ ಗ್ರಾಮದ ಶ್ರೀ ಪವಾಡ ಬಸವೇಶ್ವರ ದೇವಸ್ಥಾನದಲ್ಲಿ ನಡೆದಿದ್ದ ಬಹುಚರ್ಚಿತ ಬೆಳ್ಳಿ ಮೂರ್ತಿ ಕಳ್ಳತನ ಪ್ರಕರಣವನ್ನು ವಿಜಯಪುರ ಜಿಲ್ಲಾ ಪೊಲೀಸರು ಭೇದಿಸಿದ್ದು, ಮೂವರು ಆರೋಪಿಗಳನ್ನು ಬಂಧಿಸಿ ₹52.70 ಲಕ್ಷ ಮೌಲ್ಯದ ಕಳುವಾದ ಮೂರ್ತಿ ಹಾಗೂ ಇತರ ವಸ್ತುಗಳನ್ನು ವಶಪಡಿಸಿಕೊಂಡಿದ್ದಾರೆ ಎಂದು ಬೆಳಗಾವಿ ಉತ್ತರ ವಲಯ ಐಜಿಪಿ ಸಂದೀಪ ಪಾಟೀಲ ಹಾಗೂ ಜಿಲ್ಲಾ ಪೊಲೀಸ್ ಅಧೀಕ್ಷಕ ಲಕ್ಷಣ ನಿಂಬರಗಿ ತಿಳಿಸಿದ್ದಾರೆ.

ಗುರುವಾರ ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಜುಲೈ 5ರ ರಾತ್ರಿ ದೇವಸ್ಥಾನದ ಎರಡು ಕಬ್ಬಿಣದ ಬಾಗಿಲುಗಳ ಬೀಗ ಮುರಿದು ಒಳನುಗ್ಗಿದ್ದ ಕಳ್ಳರು, ಗರ್ಭಗುಡಿಯಲ್ಲಿದ್ದ 32 ಕೆ.ಜಿ. ತೂಕದ, ಅಂದಾಜು 51.20 ಲಕ್ಷ ಮೌಲ್ಯದ ಶ್ರೀ ಪವಾಡ ಬಸವೇಶ್ವರರ ಬೆಳ್ಳಿ ಮೂರ್ತಿಯನ್ನು ಕಳವು ಮಾಡಿದ್ದರು. ಈ ಕುರಿತು ದೇವಸ್ಥಾನ ಸಮಿತಿ ಅಧ್ಯಕ್ಷ ಕರನಂದೆಪ್ಪ ಯಮನಪ್ಪ ಬಿರಾದಾರ ನೀಡಿದ ದೂರಿನ ಮೇರೆಗೆ ಮುದ್ದೇಬಿಹಾಳ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿ–ತ್ತು.ಪ್ರಕರಣದ ಗಂಭೀರತೆಯನ್ನು ಪರಿಗಣಿಸಿದ ಪೊಲೀಸರು ಡಿಎಸ್ಪಿ ಚಂದ್ರಕಾಂತ ನಂದರೆಡ್ಡಿ, ಸಿಪಿಐ ಮಹಮ್ಮದ್ ಫಸಿಯುದ್ದೀನ್, ಪಿಎಸ್‌ಐ ಸಂಜಯ ತಿಪ್ಪರೆಡ್ಡಿ ಹಾಗೂ ಪಿಎಸ್‌ಐ ಆರ್.ಎಸ್. ಭಂಗಿ ನೇತೃತ್ವದಲ್ಲಿ ನಾಲ್ಕು ವಿಶೇಷ ತನಿಖಾ ತಂಡಗಳನ್ನು ರಚಿಸಿ ವಿವಿಧ ಆಯಾಮಗಳಲ್ಲಿ ತನಿಖೆ ನಡೆಸಿದರು.



**ವಶಪಡಿಸಿಕೊಂಡ ವಸ್ತುಗಳು**

*4 ಕೆ.ಜಿ. ತೂಕದ ಬೆಳ್ಳಿ ಮೂರ್ತಿಯ ತುಂಡುಗಳು
*23 ಕೆ.ಜಿ. ತೂಕದ ಕರಗಿಸಿದ ಬೆಳ್ಳಿಯ ಗಟ್ಟಿಗಳು
*67,600 ನಗದು
*2 ಮೊಬೈಲ್ ಫೋನ್‌ಗಳು
*ಕೃತ್ಯಕ್ಕೆ ಬಳಸಿದ ಕಾರು (ಯುವಿ–01/ಏಖ–4317)
*2 ಕಬ್ಬಿಣದ ರಾಡ್‌ಗಳು
ಸೇರಿದಂತೆ ಒಟ್ಟು 52.70 ಲಕ್ಷ ಮೌಲ್ಯದ ವಸ್ತುಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ.

ತನಿಖೆಯಲ್ಲಿ ದೊರೆತ ತಾಂತ್ರಿಕ ಹಾಗೂ ಇತರ ಸುಳಿವಿನ ಆಧ–ರದ ಮೇಲೆ ಗುಜರಾತ್‌ನಲ್ಲಿ ವಾಸವಾಗಿದ್ದ ರಾಜಸ್ಥಾನ ಮೂಲದ ಸುರೇಶಕುಮಾರ ಶಾಂತಿಲಾಲ ಸೋನಿ (51) ಎಂಬಾತನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ, ಆತ ಕಳ್ಳತನವನ್ನು ಒಪ್ಪಿಕೊಂಡಿದ್ದಲ್ಲದೆ, ತನ್ನೊಂದಿಗೆ ಬ್ರಹ್ಮಾರ್ ಟೋಪಿಯಾ ನೇಟ್ (35) ಹಾಗೂ ಇಂದ್ರಜೀತ್ ಮನಿಯಾರ್ ನೇಟ್ (33) ಕೂಡ ಕೃತ್ಯದಲ್ಲಿ ಭಾಗಿಯಾಗಿರುವುದಾಗಿ ಬಾಯ್ಬಿಟ್ಟಿದ್ದಾನೆ. ಬಳಿಕ ಉಳಿದ ಇಬ್ಬರನ್ನೂ ಬಂಧಿಸಲಾಗಿದೆ ಎಂದು ಅವರು ತಿಳಿಸಿದರು.

ಆರೋಪಿಗಳು ಜೂನ್ 20ರಂದು ಬಸರಕೋಡಕ್ಕೆ ಬಂದು ದೇವಸ್ಥಾನದ ಪರಿಶೀಲನೆ ನಡೆಸಿ ಕಳ್ಳತನದ ಸಂಚು ರೂಪಿಸಿದ್ದರೆಂದು ವಿಚಾರಣೆಯಲ್ಲಿ ತಿಳಿದುಬಂದಿದೆ. ನಂತರ ಜುಲೈ 5ರ ರಾತ್ರಿ ಕೃತ್ಯ ಎಸಗಿರುವುದಾಗಿ ಒಪ್ಪಿಕೊಂಡಿದ್ದಾರೆ.

ವಿಚಾರಣೆ ವೇಳೆ ಆರೋಪಿಗಳು ಕಳವು ಮಾಡಿದ ಬೆಳ್ಳಿ ಮೂರ್ತಿಯ ಪ್ರಮುಖ ಭಾಗವನ್ನು ನಾಲ್ಕು ತುಂಡುಗಳಾಗಿ ಕತ್ತರಿಸಿ, ಉಳಿದ ಭಾಗವನ್ನು ಕರಗಿಸಿ ಬೆಳ್ಳಿಯ ಗಟ್ಟಿಗಳನ್ನಾಗಿ ಮಾಡಿರುವುದಾಗಿ ತಿಳಿಸಿದ್ದಾರೆ ಎಂದರು.ಪ್ರಕರಣದಲ್ಲಿ ಇನ್ನೂ ಕೆಲವು ಆರೋಪಿಗಳ ಪಾತ್ರವಿರುವುದು ತನಿಖೆಯಲ್ಲಿ ಬೆಳಕಿಗೆ ಬಂದಿದ್ದು, ಅವರ ಪತ್ತೆ ಕಾರ್ಯ ಮುಂದುವರಿದಿದೆ.




ಈ ಸಂಕೀರ್ಣ ಪ್ರಕರಣವನ್ನು ತಾಂತ್ರಿಕ ನೈಪುಣ್ಯ ಹಾಗೂ ಪರಿಣಾಮಕಾರಿ ತನಿಖೆಯ ಮೂಲಕ ಭೇದಿಸಿದ ತನಿಖಾ ತಂಡದ ಕಾರ್ಯವನ್ನು ಶ್ಲಾಘಿಸಿ, ಉತ್ತರ ವಲಯ ಐಜಿಪಿ ತನಿಖಾ ತಂಡದ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಪ್ರತ್ಯೇಕ ಪ್ರಶಂಸನಾ ಪತ್ರ ನೀಡಿ ಗೌರವಿಸಿದ್ದಾರೆ ಎಂದು ಅವರು ತಿಳಿಸಿದ್ದಾರೆ.

# ಕಾಂಗ್ರೆಸ್ ಪದಾಧಿಕಾರಿಗಳು ಮಾತಿನಂತೆ ನಡೆದುಕೊಳ್ಳಲಿ :ಛಲವಾದಿ

**ಉದಯರಶ್ಮಿ ದಿನಪತ್ರಿಕೆ**



ಮುದ್ದೇಬಿಹಾಳ: ಮತಕ್ಷೇತ್ರದ ಶಾಸಕ ಅಪ್ಪಾಜಿ ನಾಡಗೌಡ ಅವರಿಗೆ ಸಚಿವ ಸ್ಥಾನ ಸಿಗದೇ ಹೋದರೆ ನಾವು ಸಾಮೂಹಿಕ ರಾಜೀನಾಮೆ ಕೊಡುತ್ತೇವೆ ಹಾಗೂ ನಮ್ಮ ಶಾಸಕರನ್ನು ರಾಜೀನಾಮೆ ಕೊಡಿಸುತ್ತೇವೆ ಎಂದ ಕಾಂಗ್ರೆಸ್ ಮುಖಂಡರು ಈಗ ರಾಜೀನಾಮೆ ಕೊಟ್ಟು ತಮ್ಮ ಮಾತಿನಂತೆ ನಡೆದುಕೊಳ್ಳಬೇಕು ಎಂದು ಬಿಜೆಪಿ ಎಸ್.ಸಿ ಮೋರ್ಚಾ ರಾಜ್ಯ ಸಾಮಾಜಿಕ ಜಾಲತಾಣದ ಸಂಚಾಲಕ ಮಂಜುನಾಥ್ ಛಲವಾದಿ ಅಗ್ರಹಿಸಿದ್ದಾರೆ.

ಈ ಕುರಿತು ಪತ್ರಿಕೆಗೆ ಹೇಳಿಕೆ ನೀಡಿರುವ ಅವರು, ಶಾಸಕರಾಗಿದ್ದಾಗಲೇ ಏನು ಕೆಲಸ ಮಾಡದ ಶಾಸಕರು, ಮಂತ್ರಿಯಾಗಿ ಏನು ಮಾಡಲು ಸದ್ಯ ಎಂಬುದನ್ನು ಮನಗಂಡ ಹೈಕಮಾಂಡ್ ಈ ನಿರ್ಧಾರ ಮಾಡಿರಬಹುದು ಎಂದು ವ್ಯಂಗ್ಯವಾಡಿದ್ದಾರೆ.

ಕಾಂಗ್ರೆಸ್ ಸರ್ಕಾರ, ಮುಖ್ಯಮಂತ್ರಿಗಳು ಮತ್ತು ಅವರ ಹೈಕಮಾಂಡ್ ನಮ್ಮ ಮತಕ್ಷೇತ್ರಕ್ಕೆ ಅನ್ಯಾಯ ಮಾಡಿದೆ, ಈ ಅನ್ಯಾಯವನ್ನು ಖಂಡಿಸಿ ರಾಜ್ಯ, ಜಿಲ್ಲಾ ಮತ್ತು ತಾಲೂಕಿನ ಪದಾಧಿಕಾರಿಗಳು ರಾಜೀನಾಮೆ ಕೊಡಬೇಕು, ತಮ್ಮ ಶಾಸಕರಿಗೆ ಸಚಿವ ಸ್ಥಾನ ಕೊಡಿಸಲಾಗದ ನಾಯಕರು ಕಾಂಗ್ರೆಸ್ ಪಕ್ಷಕ್ಕೆ ರಾಜೀನಾಮೆ ಕೊಟ್ಟು ತಮ್ಮ ಮಾತಿನ ಮೇಲೆ ನಿಲ್ಲಬೇಕು ಹಾಗೂ ಮತಕ್ಷೇತ್ರದ ಜನತೆಗೆ ಚುನಾವಣೆಯಲ್ಲಿ ನಾನು ಸಚಿವನಗುತ್ತೇನೆ ಎಂದು ಸುಳ್ಳು ಹೇಳಿ ಮತ ಪಡೆದ ಶಾಸಕರು ತಮ್ಮ ರಾಜೀನಾಮೆ ನೀಡಬೇಕು ಎಂದಿದ್ದಾರೆ.

# ಇಂಡಿ ಶಾಸಕರಿಗೆ ಸಚಿವ ಸ್ಥಾನ ನೀಡದಿರುವುದು ಅನ್ಯಾಯ :ಗದ್ಯಾಳ

**ಉದಯರಶ್ಮಿ ದಿನಪತ್ರಿಕೆ**



ವಿಜಯಪುರ: ರಾಜ್ಯ ಸಚಿವ ಸಂಪುಟ ವಿಸ್ತರಣೆಯಲ್ಲಿ ವಿಜಯಪುರ ಜಿಲ್ಲೆಯ ಇಂಡಿ ವಿಧಾನಸಭಾ ಕ್ಷೇತ್ರದ ಶಾಸಕ ಯಶವಂತರಾಯಗೌಡ ಪಾಟೀಲ ಅವ-ರಿಗೆ ಸಚಿವ ಸ್ಥಾನ ದೊರೆಯದಿರುವುದು ಇಂಡಿ ಕ್ಷೇತ್ರದ ಜನತೆಯಲ್ಲಿ ತೀವ್ರ ನಿರಾಸೆ ಮತ್ತು ಅಸಮಾಧಾನಕ್ಕೆ ಕಾರಣವಾಗಿದೆ ಎಂದು ಆದಿಬಣಜಿಗ ಸಮಾಜದ ಯುವ ಮುಖಂಡ ಸಚಿನ್ ಗದ್ಯಾಳ ತಿಳಿಸಿದ್ದಾರೆ. ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ ಅವರು, ಇಂಡಿ ಕ್ಷೇತ್ರದ ಅಭಿವೃದ್ಧಿ ಹಾಗೂ ಜನಸೇವೆಯಲ್ಲಿ ಶಾಸಕ ಯಶವಂತರಾಯಗೌಡ ಪಾಟೀಲ ಅವರು ಸಕ್ರಿಯವಾಗಿ ಕಾರ್ಯನಿರ್ವಹಿಸಿದ್ದಾರೆ. ಇಂತಹ ಹಿರಿಯ ಹಾಗೂ ಅನುಭವಿಗಳಾದ ಜನಪ್ರತಿನಿಧಿಗೆ ಸಚಿವ ಸ್ಥಾನ ನೀಡದಿರುವುದು ಕ್ಷೇತ್ರದ ಜನರ ಆಶಯಗಳಿಗೆ ವಿರುದ್ಧವಾದ ನಿರ್ಧಾರವಾಗಿದೆ ಎಂದು ಹೇಳಿದರು. ರಾಜ್ಯ ಕಾಂಗ್ರೆಸ್ ನಾಯಕತ್ವವು ಇಂಡಿ ಕ್ಷೇತ್ರದ ಜನರ ಭಾವನೆಗಳನ್ನು ಗೌರವಿಸಿ, ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ಕ್ಷೇತ್ರಕ್ಕೆ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಸಚಿನ್ ಗದ್ಯಾಳ ಒತ್ತಾಯಿಸಿದರು.

# ದಲಿತರ ಮೇಲಿನ ದೌರ್ಜನ್ಯ ತಡೆಯಲು ಅಪ್ಪುರಾಜ್ ಆಗ್ರಹ

**ಉದಯರಶ್ಮಿ ದಿನಪತ್ರಿಕೆ**




ವಿಜಯಪುರ: ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ಹದ್ದಿಹಾಳ ಗ್ರಾಮದಲ್ಲಿ ಮಾದಿಗ ಸಮುದಾಯದ ಭೂಮಾನಂದ ಅವರ ಬರ್ಬರ ಹತ್ಯೆ ಪ್ರಕರಣವನ್ನು ಭೀಮ್ ರಾಜ್ಯ ದಲಿತ್ ಸೇವಾ ಸಮಿತಿ (ರಿ.) ರಾಜ್ಯಾಧ್ಯಕ್ಷ ಅಪ್ಪುರಾಜ್ ನಿಮಾದಾರ ತೀವ್ರವಾಗಿ ಖಂಡಿಸಿದ್ದಾರೆ. ಪ್ರಾಥಮಿಕ ಮಾಹಿತಿಯ ಪ್ರಕಾರ, ಮಾರಕಾಸ್ತ್ರಗಳಿಂದ ಹಲ್ಲೆ ನಡೆಸಿ ಈ ಕೃತ್ಯ ಎಸಗಲಾಗಿದೆ ಎಂಬ ಆರೋಪಗಳು ಕೇಳಿಬಂದಿವೆ. ಈ ಪ್ರಕರಣವನ್ನು ರಾಜ್ಯ ಸರ್ಕಾರ ಅತ್ಯಂತ ಗಂಭೀರವಾಗಿ ಪರಿಗಣಿಸಿ, ನಿಷ್ಪಕ್ಷಪಾತ ಹಾಗೂ ವೇಗದ ತನಿಖೆ ನಡೆಸಿ, ತಪ್ಪಿತಸ್ಥರನ್ನು ಶೀಘ್ರ ಬಂಧಿಸಿ ಕಾನೂನಿನ ಪ್ರಕಾರ ಕಠಿಣ ಶಿಕ್ಷೆಗೆ ಒಳಪಡಿಸಬೇಕು ಎಂದು ಅಪ್ಪುರಾಜ್ ಒತ್ತಾಯಿಸಿದ್ದಾರೆ.

ಸಂತ್ರಸ್ತ ಕುಟುಂಬಕ್ಕೆ ಸೂಕ್ತ ಪರಿಹಾರ, ಭದ್ರತೆ ಹಾಗೂ ನ್ಯಾಯ ದೊರಕುವಂತೆ ಸರ್ಕಾರ ತಕ್ಷಣ ಕ್ರಮ ಕೈಗೊಳ್ಳಬೇಕು. ರಾಜ್ಯದಲ್ಲಿ ದಲಿತ ಸಮುದಾಯದವರ ಮೇಲೆ ನಡೆಯುವ ದೌರ್ಜನ್ಯಗಳನ್ನು ತಡೆಯಲು ಸರ್ಕಾರ ಪರಿಣಾಮಕಾರಿ ಕ್ರಮಗಳನ್ನು ಜಾರಿಗೆ ತರಬೇಕೆಂದು ಆಗ್ರಹಿಸಿದ್ದಾರೆ.

# ಆ.8 ರಂದು ವಿಜಯಪುರದಲ್ಲಿ ಕ್ರಿಯೋಸ್ಫಿಯರ್ ಶೃಂಗಸಭೆ

**ಉದಯರಶ್ಮಿ ದಿನಪತ್ರಿಕೆ**

ವಿಜಯಪುರ: ನಗರದ ನವೋದ್ಯಮ ಮೆರಾಕಿಫಿ ಕಂಪನಿ ಆಯೋಜಿಸಿರುವ ಕ್ರಿಯೋಸ್ಫಿಯರ್ ಶೃಂಗಸಭೆ ಆಗಷ್ಟ 8 ರಂದು ಶನಿವಾರ ನಗರದ ಬಿ.ಎಲ್.ಡಿ.ಇ ಸಂಸ್ಥೆಯ ವಚನಪಿತಾಮಹ ಡಾ. ಫ. ಗು. ಹಳಕಟ್ಟಿ ಎಂಜಿನಿಯರಿಂಗ್ ಕಾಲೇಜಿನಲ್ಲಿ ನಡೆಯಲಿದೆ.

ಬೆಳಿಗ್ಗೆ 9.30 ರಿಂದ ಸಂಜೆ 5.30ರ ವರೆಗೆ ನಡೆಯಲಿರುವ ಈ ಶೃಂಗಸಭೆತಲ್ಲಿ ಸೃಜನಶೀಲರು, ಉದ್ಯಮಿಗಳು ಮತ್ತು ನಾವೀನ್ಯಕಾಋನ್ನು ಒಂದೇ ವೇದಿಕೆಯಲ್ಲಿ ಪಾಲ್ಗೊಳ್ಳಲಿದ್ದಾರೆ.

ವೆರಿಡಿನ್ ಸಹಯೋಗದೊಂದಿಗೆ ಮೆರಾಕಿಫೈ ಆಯೋಜಿಸಿರುವ ಈ ಶೃಂಗಸಭೆ ಸೃಜನಶೀಲರು, ಉದ್ಯಮಿಗಳು, ವಿದ್ಯಾರ್ಥಿಗಳು, ಸ್ಟಾರ್ಟ್‌ಅಪ್‌ಗಳು, ಉದ್ಯಮ ವೃತ್ತಿಪರರು, ಹೂಡಿಕೆದಾರರು ಹಾಗೂ ನಾವೀನ್ಯಕಾರರು ಪಾಲ್ಗೊಂಡು ಪರಸ್ಪರ ವಿಚಾರಗಳನ್ನು ವಿನಿಮಯ ಮಾಡಿಕೊಳ್ಳಲಿದ್ದಾರೆ.

ಅಲ್ಲದೇ, ಈ ಶೃಂಗಸಭೆ ನವೋದ್ಯಮಿಗಳು ಅರ್ಥಪೂರ್ಣ ಪರಸ್ಪರ ಸಹಕಾರ ಬೆಳೆಸಿಕೊಳ್ಳುವ ಮೂಲಕ ನಾವೀನ್ಯತೆಯ ಭವಿಷ್ಯವನ್ನು ರೂಪಿಸಲು ಒಗ್ಗೂಡುವ ವೇದಿಕೆಯನ್ನು ರಚಿಸುವ ಗುರಿಯನ್ನು ಹೊಂದಿದೆ.

ದಿನವಿಡಿ ನಡೆಯುವ ಈ ಶೃಂಗಸಭೆಯಲ್ಲಿ ಖ್ಯಾತ ಉದ್ಯಮಿಗಳಿಂದ ಸ್ಫೂರ್ತಿದಾಯಕ ಗೋಷ್ಠಿಗಳು, ಚರ್ಚೆಗಳು, ಸ್ಟಾರ್ಟ್‌ಅಪ್ ಮತ್ತು ನವೋದ್ಯಮಿಗಳ ಪ್ರದರ್ಶನಗಳು, ನೆಟ್‌ವರ್ಕಿಂಗ್ ಅವಕಾಶಗಳು ಮತ್ತು ಮೆರಾಕಿಫೈನ ಂಋ-ಚಾಲಿತ ಸೃಜನಶೀಲ ವೇದಿಕೆಯ ವಿಶೇಷ ಅನುಭವ ವಿನಿಮಯ ನಡೆಯಲಿದೆ. ಈಗಾಗಲೇ ನೋಂದಣಿ ಮಾಡಿಕೊಂಡಿರುವವರು ಪ್ರಾಯೋಗಿಕ ಹೊಸ ತಂತ್ರಜ್ಞಾನ ಕುರಿತು ಆಳವಾದ ಜ್ಞಾನ ಪಡೆಯಲಿದ್ದಾರೆ. ಅಲ್ಲದೇ, ಹೊಸ ಅವಕಾಶಗಳನ್ನು ಕಂಡುಕೊಳ್ಳಲಿದ್ದಾರೆ. ಸೂಕ್ತ ಮಾರ್ಗದರ್ಶಕರೊಂದಿಗೆ ಸಂಪರ್ಕ ಹೊಂದಲು ಮತ್ತು ಸಂಭಾವ್ಯ ಸಹಯೋಗಗಳನ್ನು ಪಡೆಯಲು ಇದು ಒಂದು ಉತ್ತಮ ವೇದಿಕೆಯಾಗಿದೆ.

"ಒಂದು ಪರಿಸರ ವ್ಯವಸ್ಥೆ, ಅನಂತ ಸಾಧ್ಯತೆಗಳು" ಎಂಬ ದೃಷ್ಟಿಕೋನದೊಂದಿಗೆ, ಕ್ರಿಯೋಸ್ಫಿಯರ್ ಶೃಂಗಸಭೆಯು ವೈವಿಧ್ಯಮಯ ಪ್ರತಿಭೆಗಳನ್ನು ಒಂದೇ ಸೂರಿನಡಿ ತರುವ ಮೂಲಕ ಕರ್ನಾಟಕದಲ್ಲಿ ಬೆಳೆಯುತ್ತಿರುವ ನವೋದ್ಯಮ ಮತ್ತು ಸೃಜನಶೀಲ ಪರಿಸರ ವ್ಯವಸ್ಥೆಯನ್ನು ಬಲಪಡಿಸಲು ಪ್ರಯತ್ನಿಸುತ್ತದೆ. ಸೃಜನಶೀಲತೆ, ನಾವೀನ್ಯತೆ ಮತ್ತು ಉದ್ಯಮಶೀಲತೆಯನ್ನು ಆಚರಿಸುವ ಈ ವಿಶಿಷ್ಟ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು, ವಿಷಯ ರಚನೆಕಾರರು, ಸಂಸ್ಥಾಪಕರು, ವೃತ್ತಿಪರರು ಮತ್ತು ಮಹತ್ವಾಕಾಂಕ್ಷಿ ಉದ್ಯಮಿಗಳನ್ನು ಭಾಗವಹಿಸಲಿದ್ದಾರೆ ಎಂದು ಮೆರಾಕಿಫಿ ಕಂಪನಿಯ ಮಾಧ್ಯಮ ಪ್ರಕಟಣೆಯಲ್ಲಿ ಮಾಹಿತಿ ನೀಡಲಾಗಿದೆ.

# ಏಕವ್ಯಕ್ತಿ ಚಿತ್ರಕಲಾ ಪ್ರದರ್ಶನ 8 ರಿಂದ

**ಉದಯರಶ್ಮಿ ದಿನಪತ್ರಿಕೆ**



ಕಲಬುರಗಿ: ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಧನಸಹಾಯ ಅಡಿಯಲ್ಲಿ ಕಲಬುರಗಿಯ ಯುವ ಚಿತ್ರಕಲಾವಿದ ಸುರೇಶ ಅವರ ಏಕವ್ಯಕ್ತಿ ಚಿತ್ರಕಲಾ ಪ್ರದರ್ಶನ 8ರಿಂದ 12ರವರೆಗೆ ನಗರದ ರಾಮಮಂದಿರ ಹಿಂದುಗಡೆ ಇರುವ ಬಿಸಿಲು ಆರ್ಟ್ ಗ್ಯಾಲ-ರಿಯಲ್ಲಿ ಹಮ್ಮಿಕೊಳ್ಳಲಾಗಿದೆ 8 ರಂದು ಸಂಜೆ 5 ಗಂಟೆಗೆ ಮಾಜಿ ಶಾಸಕ ದತ್ತಾತ್ರೇಯ ಪಾಟೀಲ್ ಉದ್ಘಾಟಿಸಲಿದ್ದಾರೆ. ಸುರೇಶ ಅವರು ರಚಿಸಿದ ಕಲಾಕೃತಿಗಳನ್ನು ಚಿತ್ರಕಲಾವಿದ ಸೂರ್ಯಕಾಂತ ನಂದೂರ ಪರಿಚಯಿಸಲಿದ್ದಾರೆ. ಮುಖ್ಯ ಅತಿಥಿ-ಯಾಗಿ ಹಿರಿಯ ಚುತ್ರ ಶಿಲ್ಪಕಲಾವಿದ ಬಾಬುರಾವ್ ಎಚ್.ಅತಿಥಿಯಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪ ನಿರ್ದೇಶಕಿ ಜಗದೀಶ್ವರಿ ನಾಸಿ ಪಾಲ್ಗೊಳಲಿದ್ದು, ಹಿರಿಯ ಚಿತ್ರಕಲಾವಿದ ಮತ್ತು ಬಿಸಿಲು ಆರ್ಟ್ ಗ್ಯಾಲರಿಯ ಮುಖ್ಯಸ್ಥ ವಿ.ಬಿ.ಬಿರಾದಾರ ಅಧ್ಯಕ್ಷತೆ ವಹಿಸಲಿದ್ದಾರೆ.

ಸುರೇಶ ಅವರು ವಿವಿಧ ಮಾಧ್ಯಮದಲ್ಲಿ ರಚಿಸಿದ ಸುಮಾರು 15ಕ್ಕೂ ಹೆಚ್ಚು ಚಿತ್ರಚಿತ್ರಕಲಾಕೃತಿಗಳು ಪ್ರದರ್ಶನಗೂಳ್ಳಲಿವೆ. ಬೆಂಗಳೂರು, ಧಾರವಾಡ,ಕಲಬುರಗಿ ಸೇರಿ10ಕ್ಕೂ ಹೆಚ್ಚು ಚಿತ್ರಕಲಾ ಪ್ರದರ್ಶನಗಳಲ್ಲಿ ಭಾಗವಹಿಸಿದ್ದಾರೆ.ಚಿತ್ರಕಲೆಯಲ್ಲಿ ವಿಶೇಷ ಪರಿಣಿತಿ ಡಿಪ್ಲೋಮಾ ಪಡೆದಿರುವ ಸುರೇಶ ಅವರು,ಕಲಬುರಗಿ ಕಲಾಮಹೋತ್ಸವ, ಗುಲಬರ್ಗಾ ವಿಶ್ವವಿದ್ಯಾಲಯದ ರಾಜ್ಯೋತ್ಸವ ಪ್ರಶಸ್ತಿ,ಗದಗಿನ ವಿಜಯ ಕಲಾ ಮಂದಿರದ ಅನೃತ ಮುಹೋತ್ಸವ ಪ್ರಶಸ್ತಿ ಹೀಗೆ ಹಲವಾರು ಪ್ರಶಸ್ತಿಗಳನ್ನು ಪಡೆದುಕೊಂಡಿದ್ದಾರೆ.

# ಅನಿಮಿಷನ ಕರದಿಷ್ಟಲಿಂಗವ ಪಡೆದ ಅಲ್ಲಮ

ಕಲಬುರಗಿ: ಬಿಜ್ಜಳನ ಆಸ್ಥಾನದಲ್ಲಿ ಪ್ರಧಾನಿಯಾಗಿ ಕಾರ್ಯನಿರ್ವಹಿಸುವುದರ ಜೊತೆಗೆ ಅರಿವು, ಆಚ-ರ, ಅನುಭವಗಳ ಸಂಗಮವಾಗಿ ಕಲ್ಯಾಣಕಟ್ಟುವ ಮಹಾಕಾರ್ಯದಲ್ಲಿ ಬಸವಣ್ಣನವರು ತೊಡಗಿದ್ದರು. ಅತ್ತ ಇದೇವೇಳೆ ಅಲ್ಲಮಪ್ರಭು ಬನವಸೆಯಿಂದ ಸಂಚಾರಿಯಾಗಿ ಹೊರಟ ಅಲ್ಲಮನ ಅಮೃತ ಚರಿತ್ರೆಯನ್ನು ಚಾಮರಸ ಬಿಚ್ಚಿಡುತ್ತಾನೆ.ತೋಟದಲ್ಲಿ ಕೆಲಸ ಮಾಡುವಗೊಗ್ಗಯ್ಯ ಮತ್ತು ಅಲ್ಲಮರ ಭೇಟಿಯಾಗುವ ಪ್ರಸಂಗವನ್ನು ಚಾಮರಸ ಕವಿ ಬಹಳ ಅದ್ಭುತವಾಗಿ ಕಟ್ಟಿಕೊಡುತ್ತಾನೆ.ಎಲ್ಲದರಲ್ಲೂ ಇದ್ದು ಎಲ್ಲದರಲ್ಲೂ ಇಲ್ಲವಾದವನು. ಎಲ್ಲದರೊಳಿದ್ದು ಇದ್ದು ಇಲ್ಲದವನು ನಾನು ಅಲ್ಲಮ.ನೀನಾರು ಎಂದು ಕೇಳಿದ ಗೊಗ್ಗಯ್ಯನಿಗೆ ಅಲ್ಲಮ ಉತ್ತರಿಸುವ ಪರಿ ಮುಂದ್ನೋಡಿ ದುಡಿಯುತ್ತಿದ್ದ ಗೊಗ್ಗಯ್ಯನಿಗೆ ಆಶ್ಚರ್ಯವಾಗುತ್ತದೆ. ನೀ ಮಾಡುವ ಬಹಿರಂಗದ ಕೃಷಿಯ ಜೊತೆಗೆ ಶರೀರವೆಂಬ ಹೊಲ ಹಸನುಮಾಡುವ ಅಂತರಂಗದ ಕೃಷಿ ಕೂಡ ಬಹಳ ಅಗತ್ಯ.ಸಮತೆ, ಸೈರಣೆಯನೆಂಬ ಬೇಲಿಯನ್ನಿಕ್ಕಿ ರಕ್ಷಿಸು ಎಂದು ಒತ್ತಿ ಹೇಳುತ್ತಾನೆ. **–ಪೂಜ್ಯ ಮಹಾಂತಸ್ವಾಮಿಗಳು,ಮುದಗಲ್**

## ಮಹಿಳಾ ವಿಶ್ವವಿದ್ಯಾನಿಲಯದ ವಿಶ್ರಾಂತ ಕುಲಪತಿ ಪ್ರೊ. ಮೀನಾ ಚಂದಾವರಕರ ಅಭಿಮತ

# ಭಾರತೀಯ ಜ್ಞಾನ ಪರಂಪರೆ ಆಧುನಿಕ ಸಂಶೋಧನೆಗೆ ದಿಕ್ಸೂಚಿ

**ಉದಯರಶ್ಮಿ ದಿನಪತ್ರಿಕೆ**




ವಿಜಯಪುರ: ಪ್ರಸ್ತುತ ಯುಗದಲ್ಲಿ ನವೀನ ಸಂಶೋಧನೆಗೆ ಹೆಚ್ಚಿನ ಆದ-ತೆ ನೀಡಬೇಕಿದ್ದು, ಭಾರತೀಯ ಜ್ಞಾನ ವ್ಯವಸ್ಥೆಯನ್ನು ಆಧುನಿಕ ಶಿಕ್ಷಣದೊಂದಿಗೆ ಸಮನ್ವಯಗೊಳಿಸುವುದು ಅನಿವಾರ್ಯ ಎಂದು ಮಹಿಳಾ ವಿಶ್ವವಿದ್ಯಾನಿಲಯದ ವಿಶ್ರಾಂತ ಕುಲಪತಿ ಪ್ರೊ. ಮೀನಾ ಚಂದಾವರಕರ ಹೇಳಿದರು.ನಗರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ವ್ಯವಹಾರ ಹಾಗೂ ವಾಣಿಜ್ಯ ಅಧ್ಯಯನ ವಿಭಾಗದ ಸಹಯೋಗದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಐಸಿಎಸ್‌ಎಸ್‌ಆರ್ ಪ್ರಾಯೋಜಿತ 10 ದಿನಗಳ ಸಂಶೋಧನಾ ವಿಧಾನಶಾಸ್ತ್ರ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ದಿಕ್ಸೂಚಿ ಭಾಷಣ ಮಾಡಿದ ಕೊಲ್ಲಾಪುರದ ಶಿವಾಜಿ ವಿಶ್ವವಿದ್ಯಾಲಯದ ಅರ್ಥಶಾಸ್ತ್ರ ವಿಭಾಗದ ಹಿರಿಯ ಪ್ರಾಧ್ಯಾಪಕ ಡಾ.ಪ್ರಕಾಶ್ ಎಸ್. ಕಾಂಬಳೆ ಮಾತನಾಡಿ, ವಿಕಸಿತ ಭಾರತ ಪರಿಕಲ್ಪನೆ ಸಾಕಾರಗೊಳಿಸುವಲ್ಲಿ ಎದುರಾಗುವ ಪ್ರಮುಖ ಸವಾಲುಗಳನ್ನು ವಿವರಿಸಿದರು. ಸಂಶೋಧಕರು ದತ್ತಾಂಶ ಆಧಾರಿತ ಹಾಗೂ ಅಂತರಶಿಸ್ತೀಯ ಸಂಶೋಧನಾ ವಿಧಾನಗಳನ್ನು ಅಳವಡಿಸಿಕೊಳ್ಳಬೇಕೆಂದು ಸಲಹೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಹಿಳಾ ವಿವಿಯ ಕುಲಸಚಿವ ಶಂಕರಗೌಡ ಎಸ್. ಸೋಮನಾಳ ಮಾತನಾಡಿ, ಹತ್ತು ದಿನಗಳ ತರಬೇತಿ ಕಾರ್ಯಕ್ರಮದ ಸದುಪಯೋಗ ಪಡೆದು ಸಂಶೋಧನೆಯ ಗುಣಮಟ್ಟವನ್ನು ಹೆಚ್ಚಿಸಿಕೊಳ್ಳುವ ಮೂಲಕ ಸಮಾಜದ ಅಭಿವೃದ್ಧಿಗೆ ಅರ್ಥಪೂರ್ಣ ಕೊಡುಗೆ ನೀಡಬೇಕು ಎಂದರು.

ಕಾರ್ಯಕ್ರಮದಲ್ಲಿ ವಾಣಿಜ್ಯ ಮತ್ತು ನಿರ್ವಹಣಾ ವಿಭಾಗದ ಮುಖ್ಯಸ್ಥೆ ಹಾಗೂ ಡೀನ್ ಪ್ರೊ.ಅನಿತಾ ಆರ್. ನಾಟೇಕರ್, ವಿಶ್ವವಿದ್ಯಾನಿಲಯದ ವಿವಿಧ ಅಧಿಕಾ-ರಿಗಳು, ಗಣ್ಯರು, ಪ್ರಾಧ್ಯಾಪಕರು, ಸಂಶೋಧನಾ ವಿದ್ಯಾರ್ಥಿಗಳು ಹಾಗೂ ವಿದ್ಯಾರ್ಥಿನಿಯರು, ಉಪಸ್ಥಿತರಿದ್ದರು.

ತರಬೇತಿ ಕಾರ್ಯಕ್ರಮದ ನಿರ್ದೇಶಕ ಡಾ.ಸಿ.ಎಂ. ಮಠಪತಿ ಸ್ವಾಗತಿಸಿದರು. ಸಹ- ನಿರ್ದೇಶಕ ಡಾ.ಗಣೇಶ ಎಸ್. ಆರ್. ವಂದಿಸಿದರು. ಸಂಶೋಧನಾ ವಿದ್ಯಾರ್ಥಿನಿಯರಾದ ದಾನೇಶ್ವರಿ ಹಿರೇಮಠ, ಅಶ್ವಿನಿ ತೊರವಿ ಹಾಗೂ ಶಿಫಾ ಮುಶ್ರೀಫ್ ಕಾರ್ಯಕ್ರಮ ನಿರೂಪಿಸಿದರು.

# ಬಣಜಿಗ ಸಮಾಜಕ್ಕೆ 2ಎ ಮಿಸಲಾತಿ ನೀಡಲು ಒತ್ತಾಯ

**ಉದಯರಶ್ಮಿ ದಿನಪತ್ರಿಕೆ**



ತಾಳಿಕೋಟೆ: ಬಣಜಿಗ ಸಮೂದಾಯವು ಆರ್ಥಿಕವಾಗಿ ಶೈಕ್ಷಣಿಕವಾಗಿ ಮತ್ತು ಸಮಾಜಿಕವಾಗಿ ಅತ್ಯಂತ ಹಿಂದೂಳಿದ ಸಮಾಜವಾಗಿದೆ ಕೂಡಲೇ ಬಣಜಿಗ ಸಮಾಜಕ್ಕೆ 2ಎ ಮಿಸಲಾತಿ ನೀಡುವದರೊಂದಿಗೆ ಸಮಾಜವನ್ನು ಮುಖ್ಯವಾಹಿನಿ ಗುರುತಿಸಿಕೊಳ್ಳಲು ಸರ್ಕಾರವು ಕ್ರಮ ವಹಿಸಬೇಕೆಂದು ತಾಲೂಕಾ ಬಣಜಿಗ ಕ್ಷೇಮಾಭಿವೃದ್ಧಿ ಸಂಘದ ನೇತೃತ್ವದಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರಿಗೆ ಮನವಿ ಸಲ್ಲಿಸಿ ಒತ್ತಾಯಿಸಿದ್ದಾರೆ. ಮಂಗಳವಾರ ಕರ್ನಾಟಕ ರಾಜ್ಯ ಬಣಜಿಗ ಸಮಾಜದ ಕ್ಷೇಮಾಭಿವೃದ್ಧಿ ಸಂಘದ ನೇತೃತ್ವದಲ್ಲಿ ಸಮಾಜ ಬಾಂದವರು ತಾಲೂಕಾ ತಹಶಿಲ್ದಾರ ಶ್ರೀಮತಿ ಡಾ.ವಿನಯಾ ಹೂಗಾರ ಅವರ ಮುಖಾಂತರ ಮನವಿ ಸಲ್ಲಿಸಿ ಒತ್ತಾಯಿಸಿದ ಅವರು ಬಣಜಿಗ ಸಮಾಜವು ಶೈಕ್ಷಣಿಕವಾಗಿ ಅತ್ಯಂತ ಹಿಂದೂಳಿದಿದೆ ಸರ್ಕಾರಿ ನೇಮಕಾತಿಯಲ್ಲಿ ಅವಕಾಶದಿಂದ ವಂಚಿತರಾಗುತ್ತಾ ಸಾಗಿದ್ದಾರೆ ಇದು ಸಂವಿದಾನದ ಸದಾಶಯಕ್ಕೆ ವ್ಯತಿ-ರಿಕ್ತವಾಗಿದೆ ನ್ಯಾಯಾಲಯದ ಆದೇಶದಂತೆ ಬಣಜಿಗ ಸಮಾಜಕ್ಕೆ ನ್ಯಾಯ ಒದಗಿಸಲು ಕೂಡಲೇ ಸರ್ಕಾರವು ಕ್ರಮ ವಹಿಸಬೇಕೆಂದು ಒತ್ತಾಯಿಸಿದರು.


ಈ ಸಮಯದಲ್ಲಿ ಬಣಜಿಗ ಸಮಾಜದ ಮುಖಂಡರುಗಳಾದ ಎಂ.ಎಸ್.ಸರಶೆಟ್ಟಿ, ಮಲ್ಲಿಕಾರ್ಜುನ ಕತ್ತಿ, ಈರಣ್ಣ ಕಲ್ಬುರ್ಗಿ, ಚನಬಸ್ಸು ಸರಶೆಟ್ಟಿ, ಮಲ್ಲಿಕಾರ್ಜುನ ಸರಶೆಟ್ಟಿ, ರಮೇಶ ಸಾಲಂಕಿ, ಶಿವಲಿಂಗಪ್ಪ ಪಾಳ್ಕಿ, ಗುರುಸಂಗಪ್ಪ ಜಮ್ಮಲದಿನ್ನಿ, ಮಲ್ಲು ಸರಶೆಟ್ಟಿ, ಮಲ್ಲಿಕಾರ್ಜುನ ಪಾಳ್ಕಿ, ಶಾಂತಪ್ಪ ಇಜೇರಿ, ಮಹಾಂತೇಶ ಸರಶೆಟ್ಟಿ, ಕಾಶಿನಾಥ ಪಾಳ್ಕಿ, ಮಹೇಶ ದೇವಶೆಟ್ಟಿ, ಚನಮಲ್ಲು ಕತ್ತಿ, ಈಶ್ವರಪ್ಪ ಕತ್ತಿ, ಕಾಶಿನಾಥ ಮಡ್ಡಿ, ಸಂಗಮೇಶ ಪಾಳ್ಕಿ ಒಳಗೊಂಡು ತುಂಬಗಿ, ಚಬನೂರ, ಒಳಗೊಂಡು ಇನ್ನಿತರ ಗ್ರಾಮಗಳಿಂದ ಆಗಮಿಸಿದ ಸಮಾಜ ಬಾಂದವರು ಉಪಸ್ಥಿತರಿದ್ದರು.

# ಒತ್ತಡದ ಬದುಕಿಗೆ ಸಾಹಿತ್ಯ ಒಂದು ಪರಿಹಾರ

**ಉದಯರಶ್ಮಿ ದಿನಪತ್ರಿಕೆ**

**ರಾಜನುಡಿ**


ಮನಸ್ಸು ಆಯಾಸಗೊಂಡಾಗ ದೇಹ ವಿಶ್ರಾಂತಿ



ಕೇಳುತ್ತದೆ. ಆತ್ಮ ಆಯಾಸಗೊಂಡಾಗ ಸಾಹಿತ್ಯವನ್ನು ಹುಡುಕುತ್ತದೆ.

ಇಂದಿನ ಜಗತ್ತು ವೇಗವಾಗಿ ಓಡುತ್ತಿದೆ. ಸಮಯದ ಹಿಂದೆ ಓಡುವ ಮನುಷ್ಯನು ತನ್ನನ್ನೇ ಮರೆತುಬಿಡುವ ಹಂತಕ್ಕೆ ಬಂದಿದ್ದಾನೆ. ಉದ್ಯೋಗದ ಒತ್ತಡ, ಸ್ಪರ್ಧೆಯ ಒತ್ತಡ, ಸಂಬಂಧಗಳ ಸಂಕೀರ್ಣತೆ, ಆರ್ಥಿಕ ಅನಿಶ್ಚಿತತೆ, ಸಾಮಾಜಿಕ ಜಾಲತಾಣಗಳ ನಿರಂತರ ಹೋಲಿಕೆ. ಇವೆಲ್ಲವೂ ಮನಸ್ಸಿನ ಮೇಲೆ ಭಾರವಾಗುತ್ತಿವೆ. ಈ ಸಂದರ್ಭದಲ್ಲಿ ಒಂದು ಪ್ರಶ್ನೆ ಸಹಜವಾಗಿ ಮೂಡುತ್ತದೆ. ಒತ್ತಡದ ಬದುಕಿಗೆ ಸಾಹಿತ್ಯ ಪರಿಹಾರ ಆಗಬಲ್ಲುದೇ?

ಸಾಹಿತ್ಯವು ಔಷಧಿಯಲ್ಲ ಆದರೆ ಅದು ಮನಸ್ಸಿಗೆ



ಮದ್ದು. ಅದು ಸಮಸ್ಯೆಗಳನ್ನು ಮಾಯಗೊಳಿಸುವುದಿಲ್ಲ ಆದರೆ ಸಮಸ್ಯೆಗಳನ್ನು ನೋಡುವ ನಮ್ಮ ದೃಷ್ಟಿಯನ್ನು ಬದಲಾಯಿಸಬಲ್ಲದು. ನೋವನ್ನು ಅಳಿಸಿಹಾಕುವುದಿಲ್ಲ ಆದರೆ ಅದನ್ನು ಹೊತ್ತು ನಡೆಯುವ ಶಕ್ತಿಯನ್ನು ನೀಡಬಲ್ಲದು.

ಒಬ್ಬ ವ್ಯಕ್ತಿ ಜೀವನದಲ್ಲಿ ಎಲ್ಲವನ್ನೂ ಕಳೆದುಕೊಂಡಿದ್ದಾನೆ ಎಂದುಕೊಳ್ಳಿ. ಅವನಿಗೆ ಉಪದೇಶದ ಮಾತುಗಳು ಖಾಲಿಯಾಗಿ ಕೇಳಿಸಬಹುದು. ಆದರೆ ಒಂದು ಕವಿತೆ ಅವನ ಕಣ್ಣೀ-ರಿಗೆ ಪದಗಳನ್ನು ಕೊಡಬಹುದು. ಒಂದು ಕಥೆ ನೀನು ಒಬ್ಬನೇ ಅಲ್ಲ ಎಂಬ ಭರವಸೆಯನ್ನು ನೀಡಬಹುದು. ಒಂದು ಕಾದಂಬರಿ, ಸಂಕಷ್ಟವನ್ನು ಮೀರಿ ಬದುಕಿದ ಪಾತ್ರದ ಮೂಲಕ ಮತ್ತೆ ಎದ್ದು ನಿಲ್ಲುವ ಧೈರ್ಯವನ್ನು ತುಂಬಬಹುದು. ಇದೇ ಸಾಹಿತ್ಯದ ಶಕ್ತಿ.

ಮಹಾಕವಿ ಕುವೆಂಪು, ದ.ರಾ. ಬೇಂದ್ರೆ, ಶಿವರಾಮ ಕಾರಂತ, ಪೂರ್ಣಚಂದ್ರ ತೇಜಸ್ವಿ, ಮಾಸ್ತಿ ವೆಂಕಟೇಶ ಅಯ್ಯಂಗಾರ್ ಮೊದಲಾದವರ ಬರಹಗಳನ್ನು ಓದಿದಾಗ ಜೀವನದ ಅನೇಕ ಮುಖಗಳು ನಮ್ಮ ಮುಂದೆ ತೆರೆದುಕೊಳ್ಳುತ್ತವೆ. ಸಂತೋಷವೂ ಜೀವನದ ಭಾಗ, ದುಃಖವೂ ಜೀವನದ ಭಾಗ ಎಂಬ ಸಮತೋಲನದ ಅರಿವು ಮೂಡುತ್ತದೆ. ಆ ಅರಿವೇ ಮನಸ್ಸಿನ ಒತ್ತಡವನ್ನು ಕಡಿಮೆ ಮಾಡುವ ಮೊದಲ ಹೆಜ್ಜೆ.

ವಚನ ಸಾಹಿತ್ಯವನ್ನು ಓದಿದರೆ ಬಸವಣ್ಣನವರು ಕಾಯಕದ ಗೌರವವನ್ನು ಕಲಿಸುತ್ತಾರೆ. ಅಲ್ಲಮಪ್ರಭು ಒಳನೋಟವನ್ನು ಕಲಿಸುತ್ತಾರೆ. ಅಕ್ಕಮಹಾದೇವಿ ಆತ್ಮಸ್ವಾತಂತ್ರ್ಯದ ಮೌಲ್ಯವನ್ನು ನೆನಪಿಸುತ್ತಾರೆ. ಈ ಚಿಂತನೆಗಳು ಕೇವಲ ಧಾರ್ಮಿಕವಲ್ಲ, ಮಾನಸಿಕ ನೆಮ್ಮದಿಯನ್ನೂ ನೀಡುವ ಜೀವನದರ್ಶನ.

ಒತ್ತಡದ ಮೂಲಗಳಲ್ಲಿ ಒಂದು "ನಾನು ಮಾತ್ರ ಈ ಸಮಸ್ಯೆಯನ್ನು ಎದುರಿಸುತ್ತಿದ್ದೇನೆ" ಎಂಬ ಭಾವನೆ. ಸಾಹಿತ್ಯ ಆ ಭಾವನೆಯನ್ನು ಹೋಗಲಾಡಿಸುತ್ತದೆ. ಶತಮಾನಗಳಿಂದ ಮನುಷ್ಯರು ಇದೇ ರೀತಿಯ ಸಂತೋಷ, ನೋವು, ಪ್ರೀತಿ, ವಿರಹ, ಹೋರಾಟಗಳನ್ನು ಅನುಭವಿಸಿದ್ದಾರೆ ಎಂಬುದನ್ನು ಅದು ತಿಳಿಸುತ್ತದೆ. ಇದರಿಂದ ನಮ್ಮ ನೋವು ಮಾತ್ರ ಬದುಕು ಎಂದು ಅನಿಸದು. ಅದು ಮಾನವನ ಬದುಕಿನ ಅನುಭವದ ಒಂದು ಭಾಗವೆಂದು ಅರಿವಾಗಬಹುದು.

ಆದರೆ ಸಾಹಿತ್ಯವು ಸಮಸ್ಯೆಗಳಿಂದ ಓಡಿಹೋಗುವ ದಾರಿಯಲ್ಲ. ಅದು ಸಮಸ್ಯೆಗಳನ್ನು ಎದುರಿಸುವ ಒಳಬಲವನ್ನು ಬೆಳೆಸುವ ಸಾಧನ. ಒಳ್ಳೆಯ ಪುಸ್ತಕವನ್ನು ಓದಿದ ನಂತರ ಪರಿಸ್ಥಿತಿ ಬದಲಾಗದಿರಬಹುದು ಆದರೆ ಅದನ್ನು ಎದುರಿಸುವ ಮನಸ್ಸು ಬದಲಾಗಿರಬಹುದು. ಇದೇ ಸಾಹಿತ್ಯದ ದೊಡ್ಡ ಗೆಲುವು.


ಇಂದಿನ ಡಿಜಿಟಲ್ ಯುಗದಲ್ಲಿ ಮಾಹಿತಿ ಅಪಾರವಾಗಿದೆ. ಆದರೆ ಮಾಹಿತಿ ಮನಸ್ಸಿಗೆ ಶಾಂತಿ ಕೊಡುವುದಿಲ್ಲ. ಒಳ್ಳೆಯ ಸಾಹಿತ್ಯ ಮಾತ್ರ ಮನಸ್ಸನ್ನು ನಿಧಾನವಾಗಿ ಒಳಮುಖವಾಗಿಸುತ್ತದೆ. ಓದುವ ಅಭ್ಯಾಸ ನಮ್ಮನ್ನು ಕ್ಷಣಿಕ ಉದ್ವೇಗದಿಂದ ಹೊರತೆಗೆದು ಆಳವಾದ ಚಿಂತನೆಯ ಕಡೆಗೆ ಕರೆದೊಯ್ಯುತ್ತದೆ.

ಹೀಗಾಗಿ, ಒತ್ತಡದ ಬದುಕಿಗೆ ಸಾಹಿತ್ಯವು ಒಂದೇ ಪರಿಹಾರ ಎಂದು ಹೇಳುವುದು ಸರಿಯಲ್ಲ. ಕೆಲವೊಮ್ಮೆ ಗಂಭೀರ ಮಾನಸಿಕ ಒತ್ತಡಕ್ಕೆ ವೈದ್ಯಕೀಯ ಅಥ-ವಾ ಮನೋವೈಜ್ಞಾನಿಕ ಸಹಾಯವೂ ಬೇಕಾಗುತ್ತದೆ. ಆದರೆ ಸಾಹಿತ್ಯವು ಆ ಪ್ರಯಾಣದಲ್ಲಿ ಅತ್ಯಂತ ಮೌಲ್ಯಯುತ ಸಂಗಾತಿಯಾಗಬಲ್ಲದು. ಅದು ಭರವಸೆ ನೀಡುತ್ತದೆ, ಆತ್ಮಾವಲೋಕನಕ್ಕೆ ಪ್ರೇರೇಪಿಸುತ್ತದೆ ಮತ್ತು



ಮಾನವೀಯತೆಯನ್ನು ಜೀವಂತವಾಗಿರಿಸುತ್ತದೆ.

ಸಾಹಿತ್ಯವು ಜೀವನದ ಭಾರವನ್ನು ಹೊತ್ತುಕೊಳ್ಳುವುದಿಲ್ಲ. ಆ ಭಾರವನ್ನು ಹೊರುವ ಮನಸ್ಸನ್ನು ಗಟ್ಟಿಗೊಳಿಸುತ್ತದೆ.



ಅದು ಸಮಸ್ಯೆಗಳನ್ನು ಅಳಿಸುವುದಿಲ್ಲ ಆದ-ರೆ ಮನುಷ್ಯನನ್ನು ಸಮಸ್ಯೆಗಳಿಗಿಂತ ದೊಡ್ಡವನನ್ನಾಗಿ ಮಾಡುತ್ತದೆ. ಹೌದಲ್ವಾ!

ಲೇಖನ
– ಡಾ.ರಾಜಶೇಖರ ನಾಗೂರ
ಸಂಚಾಲಕರು
'ನಮ್ಮ ಕಥಾ ಅರಮನೆ'



# ನೀರೆತ್ತುವ ಮೋಟಾರ್, ಸ್ಟಾರ್ಟರ್ ಕಳವು: ಬಂಧನ



ಕಲಬುರಗಿ:ಜೇವರ್ಗಿ ತಾಲ್ಲೂಕಿನ ಯಡ್ರಾಮಿ ಮತ್ತು ನೆಲೋಗಿ ಪೊಲೀಸ್ ಠಾಣೆಗಳ ವ್ಯಾಪ್ತಿಯ ಕಾಚಾಪೂರ, ತೆಲಗಬಾಳ ಮತ್ತು ಹರವಾಳ ಗ್ರಾಮದ ಹಳ್ಳದ ಹತ್ತಿರವಿರುಗ ನೀರೆತ್ತುವ ಮೋಟಾರ್ ಮತ್ತು ಸ್ಟಾರ್ಟರ್, ಫ್ಯೂಜ್ ಹಾಗೂ ಆಟೋ ಸ್ಟಾರ್ಟಗಳನ್ನು ಕಳವು ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಇಬ್ಬರನ್ನು ಪೊಲೀಸರು ಬಂಧಿಸಿದ್ದಾರೆ.

ಶಹಾಪೂರ ತಾಲ್ಲೂಕಿನ ಗೋಗಿ ತಾಂಡಾದ ಕಿಶನ್ ತಂದೆ ಟೋಪು ಜಾಧವ್ ಬಂಧಿಸಿ, ಕಾನೂನು ಸಂಘರ್ಷಕ್ಕೊಳಗಾದ ಬಾಲಕನನ್ನು ವಿಚಾರಣೆಗೆ ಒಳಪಡಿಸಿ ಅವರಿಂದ ಕಳ್ಳತನ ಮಾಡಿದ 5 ನೀರೆತ್ತುವ ಮೋಟಾರ್, 3 ಸ್ಟಾರ್ಟರ್ ಹಾಗೂ ಕೇಬಲ್ ವೈನ್ನು ವಶಪಡಿಸಿಕೊಂಡಿದ್ದಾರೆ.

ಜೇವರ್ಗಿ ತಾಲ್ಲೂಕಿನ ಯಡ್ರಾಮಿ ಮತ್ತು ನೆಲೋಗಿ ಪೊಲೀಸ್ ಠಾಣೆಗಳ ವ್ಯಾಪ್ತಿಯ ಕಾಚಾಪೂರ, ತೆಲಗಬಾಳ ಮತ್ತು ಹರವಾಳ ಗ್ರಾಮದ ಹಳ್ಳದ ಹತ್ತಿರವಿರುಗ ನೀರೆತ್ತುವ ಮೋಟಾರ್ ಮತ್ತು ಸ್ಟಾರ್ಟರ್, ಫ್ಯೂಜ್ ಹಾಗೂ ಆಟೋ ಸ್ಟಾರ್ಟಗಳನ್ನು ಕಳವು ಮಾಡಿದ ಪ್ರಕರಣದ ಆರೋಪಿಗಳ ಪತ್ತೆಗೆ ಗ್ರಾಮೀಣ ಉಪ ವಿಭಾಗದ ಡಿವೈಎಸ್‌ಪಿ ಲೋಕೇಶ್ವರಪ್ಪ ಅವರ ಮಾರ್ಗದರ್ಶನದಲ್ಲಿ ಜೇವರ್ಗಿ ಸಿಪಿಐ ಬಾಪುಗೌಡ ಅವರ ನೇತೃತ್ವದಲ್ಲಿ ಯಡ್ರಾಮಿ ಪೊಲೀಸ್ ಠಾಣೆ ಪಿಎಸ್‌ಐ ಶ್ರೀಶೈಲ್ ಅಂಬಾಟಿ, ಸಿಬ್ಬಂದಿಗಳಾದ ಸುರೇಶಕುಮಾರ, ಹೈದರಸಾ, ಶಿವಾನಂದ, ಸಿದ್ದರಾಮ, ದೊಡ್ಡಬಸಪ್ಪ, ಬಾಷಾಸಾಬ ಮತ್ತು ಮೌಲಪ್ಪ ಅವರನ್ನು ಒಳಗೊಂಡ ತಂಡ ರಚಿಸಲಾಗಿತ್ತು. ಈ ತಂಡ ತನಿಖೆ ನಡೆಸಿ ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದೆ.

ಈ ಕಾರ್ಯಾಚರಣೆಯಲ್ಲಿ ಭಾಗವಹಿಸಿದ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ಕಾರ್ಯವನ್ನು ಎಸ್‌ಪಿ ಅಡ್ಡೂರು ಶ್ರೀನಿವಾಸಲು ಅವರು ಶ್ಲಾಘಿಸಿದ್ದಾರೆ.

# ನವೀನ ತಂತ್ರಜ್ಞಾನ ಅಳವಡಿಸಿ ಕೊಳ್ಳಲು ಪ್ರಾಧ್ಯಾಪಕರಿಗೆ ಸುರೇಶ ಜಂಗೆ ಸಲಹೆ



ಜೇವರ್ಗಿ : ಅಧ್ಯಾಪಕರು ತಮ್ಮ ವೃತ್ತಿಯಲ್ಲಿ ಬೋಧನಾ ಕೌಶಲ್ಯವನ್ನು ಸುಧಾರಿಸಿಕೊಳ್ಳಲು ನವೀನ ತಂತ್ರಜ್ಞಾನ ಬಳಸಿಕೊಂಡು ವೃತ್ತಿಪರ ನಡೆವಳಿಕೆ ಹಾಗೂ ಆತ್ಮವಿಶ್ವಾಸವನ್ನು ಹೆಚ್ಚಿಸಿಕೊಳ್ಳಬೇಕು ಎಂದು ಗುಲಬರ್ಗಾ ವಿಶ್ವ ವಿದ್ಯಾಲಯದ ಗ್ರಂಥಪಾಲಕರು ಮತ್ತು ಆಂತರಿಕ ಗುಣಮಟ್ಟ ಭರವಸೆ ಕೋಶದ ಸಂಯೋಜಕರಾದ ಡಾ. ಸುರೇಶ ಜಂಗೆ ಹೇಳಿದರು.

ಅವರು ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಆಂತರಿಕ ಗುಣಮಟ್ಟ ಭರವಸೆ ಕೋಶ ಅಡಿಯಲ್ಲಿ "ಅಕಾಡೆಮಿ ಉತ್ಕೃಷ್ಟತೆಗಾಗಿ ಸಾಮರ್ಥ್ಯ ನಿರ್ಮಾಣ" ಶೀರ್ಷಿಕೆಯಲ್ಲಿ ಆಯೋಜಿಸಿದ್ದ ಪ್ರಾಧ್ಯಾಪಕರಿಗಾಗಿ ಒಂದು ವಾರದ 'ಅಧ್ಯಾಪಕರ ಅಭಿವೃದ್ದಿ ಕಾರ್ಯಕ್ರಮ'ವನ್ನು ಉದ್ಘಾಟಿಸಿ, 'ಕಾರ್ಯಕ್ಷಮತೆ ಆಧಾರಿತ ಸ್ವಯಂ ಮೌಲ್ಯ ಮಾಪನ ವರದಿ ತಯಾರಿಕೆ' ವಿಷಯದ ಕುರಿತು ಮಾತನಾಡಿದರು.

ಅಧ್ಯಕ್ಷತೆವಹಿಸಿದ್ದ ಪ್ರಾಂಶುಪಾಲೆ ಡಾ.ಶಾಂತಾ ಅಸ್ಟಿಗೆ ಮಾತನಾಡುತ್ತ, ಅಧ್ಯಾಪಕರು ಉತ್ತಮ ವೃತ್ತಿ ಕೌಶಲ್ಯಗಳನ್ನು ಬೆಳೆಸಿಕೊಳ್ಳಬೇಕು ಮತ್ತು ಸಂಶೋಧನಾ ಮನೋಭಾವ ರೂಢಿಸಿಕೊಳ್ಳಲು ತಿಳಿಸಿದರು.

ಕಾರ್ಯಕ್ರಮದಲ್ಲಿ ಐಕ್ಯುಎಸಿ ಸಹ ಸಂಯೋಜಕ ಡಾ. ರವೀಂದ್ರ ಸ್ವಾಗತಿಸಿದರು. ಸಂಯೋಜಕ ಡಾ. ಸಂದೀಪ ತಿವಾರಿ ಪ್ರಾಸ್ತಾವಿಕ ಮಾತನಾಡಿ ದರು. ತೇಜಶ್ವಿನಿ ಪ್ರಾರ್ಥಿಸಿದರು. ಕನ್ನಡ ಅಧ್ಯಾಪಕ ಭೀಮಣ್ಣ ನಿರೂಪಿಸಿದರು. ಸಿಬ್ಬಂದಿ ಕಾರ್ಯದರ್ಶಿ ಡಾ. ಖಾಜಾವಲಿ ಈಚನಾಳ ವಂದಿಸಿದರು. ಕಾರ್ಯಕ್ರಮದಲ್ಲಿ ವಿವಿಧ ವಿಭಾಗಗಳ ಮುಖ್ಯಸ್ಥರು ಹಿರಿಯ ಪ್ರಾಧ್ಯಾಪಕರಾದ ಡಾ. ರಾಭಿಯಾಬೇಗಂ, ಡಾ. ಸಂತೋಷ್ ಕುಮಾರ್, ಡಾ. ನಾಗಣ್ಣ ಕಿಲಾಡಿ, ಡಾ. ಎನ್ ಜಿ ಶ್ರೀಧರ್, ಖತೇಜಾ ನಸ್ರಿನ್, ಡಾ. ಅಶೋಕ್ ಹೋಳ್ಕರ್, ಡಾ. ರೂಪಾ ಕುಲಕರ್ಣಿ, ಡಾ. ಮಂಜುಳಾ ವಿ. ಪಿ, ಡಾ. ಶಿಲ್ಪಾ ಜೆ. ಡಾ.ಶರಣಪ್ಪ ಗುಂಡಗುರ್ತಿ, ಕುಪೇಂದ್ರ ರಾಠೋಡ್, ಡಾ. ತಿಪ್ಪಣ್ಣ ವಗ್ದಾಳ, ಡಾ. ಶಿವಕುಮಾರ್ , ಡಾ.ಹೊನ್ನೂರ್ ಸ್ವಾಮಿ ಡಾ. ಮೋಹನ್ ಬೈಲ್ ಪತ್ತಾರ್, ಶ್ರೀ ಮತಿ ಫುಲಾವತಿ ಜಲ್ದೆ ಹಾಗೂ ಇನ್ನಿತರರು ಉಪಸ್ಥಿತರಿದ್ದರು

# ವಡ್ಡರ ಗಲ್ಲಿಯಲ್ಲಿ ಆಷಾಢ ಜಾತ್ರಾ ಮಹೋತ್ಸವ ಆಚರಣೆ

ಕಲಬುರಗಿ : ನಗರದ ವಡ್ಡರ ಗಲ್ಲಿಯಲ್ಲಿ ಆಷಾಢ ಜಾತ್ರಾ ಮಹೋತ್ಸವವನ್ನು ಭಕ್ತಿಭಾವ ಹಾಗೂ ಸಂಭ್ರಮದಿಂದ ಆಚರಿಸಲಾಯಿತು. ಜಾತ್ರಾ ಮಹೋತ್ಸವದಲ್ಲಿ ವಡ್ಡರ ಸಮಾಜದ ಹಿರಿಯರು, ಮುಖಂಡರು, ಯುವಕರು ಹಾಗೂ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡರು.

ಈ ಸಂದರ್ಭದಲ್ಲಿ ಸಮಾಜದ ಹಿರಿಯರಾದ ಭೀಮಶಂಕರ್ ಬಂಕುರ್, ರಾಜು ಎಂ. ಪುರೆ, ತಿಮ್ಮಣ್ಣ ಜಾದವ್, ಬಸವರಾಜ್ ಇಂಚಲಗಿ, ರಾಘವೇಂದ್ರ ಲಸ್ಕರಿ, ಶಿವಕುಮಾರ ಎಂ. ಪುರೆ, ದೀಪಕ್ ಪಪ್ಪು ಹಾಗೂ ನೀಲಕಂಠ ಸಿದ್ದಮ್ಮ ಭೋವಿ ಸೇರಿದಂತೆ ಸಮಾಜದ ಅನೇಕ ಮುಖಂಡರು ಉಪಸ್ಥಿತರಿದ್ದರು.

ಆಷಾಢ ಜಾತ್ರಾ ಮಹೋತ್ಸವದ ಅಂಗವಾಗಿ ವಿವಿಧ ಧಾರ್ಮಿಕ ಪೂಜಾ ವಿಧಿವಿಧಾನಗಳು ನೆರವೇರಿಸಲ್ಪಟ್ಟವು. ಸಮಾಜದ ಸದಸ್ಯರು ಪರಸ್ಪರ ಶುಭಾಶಯಗಳನ್ನು ವಿನಿಮಯ ಮಾಡಿಕೊಂಡು, ಸಮಾಜದ ಐಕ್ಯತೆ ಹಾಗೂ ಸೌಹಾರ್ದವನ್ನು ಬಲಪಡಿಸುವ ಸಂಕಲ್ಪ ವ್ಯಕ್ತಪಡಿಸಿದರು.

# 11 ರಂದು ಕಲಬುರಗಿಯಲ್ಲಿ ದುಂಡು ಮೇಜಿನ ಸಭೆ



ಕಲಬುರಗಿ: ನಂಜುಂಡಪ್ಪ ವರದಿಯ ಮಾನದಂಡದಂತೆ ಸರಕಾರದಿಂದ ಅಧಿಕೃತವಾಗಿ ರಚನೆಗೊಂಡು ವರದಿ ಬಹಿರಂಗಗೊಂಡಿರುವ ಗೋವಿಂದರಾವ್ ನೇತೃತ್ವದ ಪ್ರಾದೇಶಿಕ ಅಸಮತೋಲನಾ ಸಮಿತಿಯ ವರದಿ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶದ ಸರ್ವಾಂಗೀಣ ರಚನಾತ್ಮಕ ಕಾಲಮಿತಿಯ ಪ್ರಗತಿಯ ಕುರಿತು ಬರುವ ಆ. 11 ರಂದು ಶರಣಬಸವ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ಬೆಳಿಗ್ಗೆ 11.30 ಗಂಟೆಯಿಂದ ಕಲ್ಯಾಣ ಕರ್ನಾಟಕ ಪ್ರದೇಶದ ಏಳು ಜಿಲ್ಲೆಗಳ ಗಣ್ಯರ, ಪರಿಣಿತ ತಜ್ಞರ, ಚಿಂತಕರ, ದುಂಡು ಮೇಜಿನ ಸಭೆಯನ್ನು ಆಯೋಜಿಸಲಾಗಿದೆ.

ಎಸ್.ಎಂ. ಕೃಷ್ಣರವರ ಸರಕಾರದ ಅವಧಿಯಲ್ಲಿ ಕರ್ನಾಟಕ ರಾಜ್ಯದಲ್ಲಿನ ಪ್ರಾದೇಶಿಕ ಅಸಮತೋಲನೆ ನಿವಾರಣೆಗೆ ನಂಜುಂಡಪ್ಪ ನೇತೃತ್ವದಲ್ಲಿ ಪ್ರಾದೇಶಿಕ ಅಸಮತೋಲನಾ ನಿವಾರಣೆ ಸಮಿತಿ ರಚಿಸಲಾಗಿತ್ತು. ನಂಜುಂಡಪ್ಪ ನೇತೃತ್ವದ ಸಮಿತಿ 2002 ರಲ್ಲಿ ಸುಮಾರು 1216 ಪುಟಗಳ ವರದಿಯನ್ನು ಸರಕಾರಕ್ಕೆ ಸಲ್ಲಿಸಿತ್ತು. ಈ ವರದಿಯಲ್ಲಿ ಕನಾಟಕದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶ ಅತ್ಯಂತ ಹಿಂದುಳಿದು ಹೀನಾಯ ಸ್ಥಿತಿಯಲ್ಲಿರುವ ಬಗ್ಗೆ ಅಂಕಿ ಅಂಶಗಳ ಸಹಿತ ಅಧಿಕೃತವಾಗಿ ತಿಳಿಸಿತ್ತು. ಸುಮಾರು 24 ವರ್ಷಗಳು ಗತಿಸಿದರೂ ಸಹ ನಂಜುಂಡಪ್ಪ ವರದಿಯ ಶಿಫಾರಸ್ಸಿನ ಸೂಚ್ಯಂಕಗಳಂತೆ ಅಭಿವೃದ್ಧಿ ಕಾರ್ಯಗಳು ಹಮ್ಮಿಕೊಂಡರೂ ಸಹ ಕಲ್ಯಾಣ ಕರ್ನಾಟಕ ಸೇರಿದಂತೆ, ಕರ್ನಾಟಕದ ಬಹುತೇಕ ತಾಲ್ಲೂಕುಗಳು ಅತ್ಯಂತ ಹಿಂದುಳಿದ ಸ್ಥಾನದಲ್ಲಿಯೆ ನಿಂತಿವೆ. ಇದನ್ನು ಗಮನದಲ್ಲಿಟ್ಟುಕೊಂಡು ಸರಕಾರ ಕಳೆದ ವರ್ಷ ಗೋವಿಂದರಾವ್ ನೇತೃತ್ವದಲ್ಲಿ ನೂತನ ಪ್ರಾದೇಶಿಕ ಅಸಮತೋಲನಾ ನಿವಾರಣಾ ಸಮಿತಿ ರಚನೆ ಮಾಡಿತ್ತು. ಸರಕಾರದ ನಿರ್ದೇಶನದಂತೆ ಸಮಿತಿ ಕಳೆದ ಆರು ತಿಂಗಳ ಪೂರ್ವದಲ್ಲಿಯೆ ವರದಿ ನೀಡಿದೆ. ಗೋವಿಂದರಾವ ವರದಿ ವಿಸ್ತ್ರತವಾಗಿ ಗಮನಿಸಿದರೆ, ಕಲ್ಯಾಣ ಕರ್ನಾಟಕ ಮತ್ತೆ ತನ್ನ ಹಿಂದುಳಿಯುವಿಕೆ ಸ್ಥಾನವನ್ನು ಮುಂದುವರೆಸಿಕೊಂಡು ಬಂದಿರುವುದು ಗಂಭೀರವಾದ ವಿಷಯವಾಗಿದೆ. ಈ ಬಗ್ಗೆ ಸಚಿವರು, ಸಂಸದರು, ಶಾಸಕರು ಎಲ್ಲಾ ಪಕ್ಷದ ನಾಯಕರು ಚಿಂತಕರು, ಅಭಿವೃದ್ಧಿ ಪರ ಹೋರಾಟಗಾರರು ಗಂಭೀರವಾಗಿ ಅವಲೋಕನ ಮಾಡುವುದು ಅತಿ ಅವಶ್ಯವಾಗಿದೆ.

ಈ ಮಹತ್ವದ ದುಂಡು ಮೇಜಿನ ಸಭೆಗೆ ಕಲ್ಯಾಣ ಕರ್ನಾಟಕದ ಪರಿಣಿತ ತಜ್ಞರು, ಚಿಂತಕರು, ಭಾಗವಹಿಸಲು ಕಲ್ಯಾಣ ಕರ್ನಾಟಕ ಹೋರಾಟ ಸಮಿತಿಯ ಗೌರವಾಧ್ಯಕ್ಷ ಬಸವರಾಜ ದೇಶಮುಖ ಮತ್ತು ಸಂಸ್ಥಾಪಕ ಅಧ್ಯಕ್ಷ ಡಾ. ಲಕ್ಷ್ಮಣ ದಸ್ತಿ ಅವರು ಪ್ರಕಟಣೆಯ ಮೂಲಕ ಕೋರಿದ್ದಾರೆ.



# ವಿದ್ಯಾರ್ಥಿಗಳ ಯಶಸ್ಸಿನ ಪ್ರೇರಣಾಸ್ತಂಭ ಡಾ. ಶರಣು ಹೊನ್ನಗೆಜ್ಜೆ

ಕಲಬುರಗಿ: ಶಿಕ್ಷಣವನ್ನು ಕೇವಲ ಉದ್ಯೋಗದ ಸಾಧನವಲ್ಲ, ಸಮಾಜ ನಿರ್ಮಾಣದ ಮಹಾಯಜ್ಞವೆಂದು ನಂಬಿ ನಿರಂತರವಾಗಿ ಶ್ರಮಿಸುತ್ತಿರುವ ಡಾ. ಶರಣು ಬಿ. ಹೊನ್ನಗೆಜ್ಜೆ ಅವರು ಶಿಕ್ಷಣ ಕ್ಷೇತ್ರದಲ್ಲಿ ವಿಶಿಷ್ಟ ಗುರುತನ್ನು ಮೂಡಿಸಿದ್ದಾರೆ ಎಂಬ ಅಭಿಪ್ರಾಯವನ್ನು ಹಲವರು ವ್ಯಕ್ತಪಡಿಸುತ್ತಾರೆ. ವಿದ್ಯಾರ್ಥಿಗಳ ಭವಿಷ್ಯ ರೂಪಿಸುವ ಸಂಕಲ್ಪದೊಂದಿಗೆ ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸಿ ಶೈಕ್ಷಣಿಕ ಸೇವೆಯಲ್ಲಿ ತೊಡಗಿರುವ ಅವರ ಕಾರ್ಯ ಶಿಕ್ಷಣ ವಲಯದಲ್ಲಿ ಗಮನಾರ್ಹವಾಗಿದೆ ಎಂದು ಹೇಳಲಾಗುತ್ತಿದೆ.

ಕಲಬುರಗಿಯ ಹಳೆ ಜೇವರ್ಗಿ ರಸ್ತೆಯ ಸದಾಶಿವನಗರದಲ್ಲಿ "ಡಾ. ಶರಣು ಬಿ. ಹೊನ್ನಗೆಜ್ಜೆ ಅನನ್ಯ ಕಲಾ ಮತ್ತು ವಾಣಿಜ್ಯ ಪದವಿ ಮಹಾವಿದ್ಯಾಲಯ" ಹಾಗೂ "ಸ್ನಾತಕೋತ್ತರ ಪದವಿ ಮಹಾವಿದ್ಯಾಲಯ"ವನ್ನು ಸ್ಥಾಪಿಸಿ, ಉನ್ನತ ಶಿಕ್ಷಣವನ್ನು ವಿದ್ಯಾರ್ಥಿಗಳಿಗೆ ಸುಲಭವಾಗಿ ಲಭ್ಯವಾಗುವಂತೆ ಮಾಡುವಲ್ಲಿ ಅವರು ಮಹತ್ವದ ಹೆಜ್ಜೆ ಇಟ್ಟಿದ್ದಾರೆ ಎಂದು ಶಿಕ್ಷಣ ತಜ್ಞರು ಅಭಿಪ್ರಾಯ ವ್ಯಕ್ತಪಡಿಸುತ್ತಾರೆ. ಈ ಸಂಸ್ಥೆಗಳ ಮೂಲಕ ಗ್ರಾಮೀಣ ಹಾಗೂ ನಗರ ಪ್ರದೇಶಗಳ ಸಾವಿರಾರು ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣದ ಅವಕಾಶ ದೊರೆತಿದೆ ಎಂದು ತಿಳಿಸಲಾಗಿದೆ.

ಆರ್ಥಿಕವಾಗಿ ಹಿಂದುಳಿದ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಗೌರವಧನ, ಆರ್ಥಿಕ ನೆರವು ಮತ್ತು ಶಿಕ್ಷಣದ ಅವಕಾಶಗಳನ್ನು ಒದಗಿಸುವ ಮೂಲಕ ಅನೇಕರ ಉನ್ನತ ಶಿಕ್ಷಣದ ಕನಸಿಗೆ ಅವರು ಬೆನ್ನೆಲುಬಾಗಿದ್ದಾರೆ ಎಂದು ವಿದ್ಯಾರ್ಥಿಗಳು ಮತ್ತು ಪೋಷಕರು ಮೆಚ್ಚುಗೆ ವ್ಯಕ್ತಪಡಿಸುತ್ತಾರೆ. ಜಾತಿ, ಧರ್ಮ, ಪಂಥ ಎಂಬ ಯಾವುದೇ ಭೇದವಿಲ್ಲದೆ ಸರ್ವಧರ್ಮ ಸಮಭಾವದ ಮನೋಭಾವದಿಂದ ಸಾಮಾಜಿಕ ಹಾಗೂ ಧಾರ್ಮಿಕ ಸೇವಾ ಕಾರ್ಯಗಳಿಗೆ ಸಹಕಾರ ನೀಡುತ್ತಿರುವುದು ಅವರ ವ್ಯಕ್ತಿತ್ವದ ಮತ್ತೊಂದು ವಿಶೇಷತೆ ಎಂದು ಸ್ಥಳೀಯರು ಅಭಿಪ್ರಾಯಪಡುತ್ತಾರೆ. ಈ ಕಾರ್ಯಗಳಿಂದ ಅನೇಕ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ಹೊಸ ಚೈತನ್ಯ ದೊರೆತಿದೆ ಎಂದು ಹೇಳಲಾಗುತ್ತಿದೆ.

ಶಿಕ್ಷಣ ಮತ್ತು ಸಮಾಜಸೇವೆಯಲ್ಲಿನ ಅವರ ಕೊಡುಗೆಯನ್ನು ಪರಿಗಣಿಸಿ "ಶಿಕ್ಷಣ ರತ್ನ ಪ್ರಶಸ್ತಿ", "ದೇವಮಾನವ ಪ್ರಶಸ್ತಿ" ಸೇರಿದಂತೆ ಹಲವು ಗೌರವಗಳು ಅವರಿಗೆ ಲಭಿಸಿವೆ ಎಂದು ತಿಳಿಸಲಾಗಿದೆ. ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಅವರ ಬದ್ಧತೆ ಮತ್ತು ಸಮಾಜಮುಖಿ ಚಿಂತನೆ ಅನೇಕ ಯುವಕರಿಗೆ ಪ್ರೇರಣೆಯಾಗಿದೆ ಎಂದು ಶಿಕ್ಷಣ ವಲಯದವರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಮುಂದಿನ ದಿನಗಳಲ್ಲಿ ಇನ್ನಷ್ಟು ವಿದ್ಯಾರ್ಥಿಗಳ ಬದುಕಿಗೆ ಬೆಳಕಾಗಲಿ ಎಂಬ ಆಶಯವನ್ನು ಸಾರ್ವಜನಿಕರು ವ್ಯಕ್ತಪಡಿಸಿದ್ದಾರೆ.

# ಕನ್ನಡದ ಖ್ಯಾತ ಕತೆಗಾರ ಮತ್ತು ಕಾದಂಬರಿಕಾರ ಯಶವಂತ ಚಿತ್ತಾಲ



ಕಲಬುರಗಿ : ಅರವತ್ತಾರು ಕಥೆಗಳನ್ನು ಹಾಗೂ ಹಲವು ಕಾದಂಬರಿಗಳನ್ನು ಬರೆದಿರುವ ಚಿತ್ತಾಲರು ಕನ್ನಡದ ಪ್ರಮುಖ, ಖ್ಯಾತ ಕಥೆಗಾರ ಹಾಗೂ ಕಾದಂಬರಿಕಾರರಾಗಿದ್ದಾರೆ ಎಂದು ಉಪನ್ಯಾಸಕ, ಲೇಖಕ ಎಚ್.ಬಿ.ಪಾಟೀಲ ಹೇಳಿದರು. ನಗರದ ಆಳಂದ ರಸ್ತೆಯ ಶಿವ ನಗರದಲ್ಲಿನ 'ಜ್ಞಾನ ಚಿಗುರು ಟ್ಯುಟೋರಿಯಲಗಸ್'ನಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಮಂಗಳವಾರ ಸಂಜೆ ಜರುಗಿದ 'ಯಶವಂತ ಚಿತ್ತಾಲರ 98ನೇ ಜನ್ಮದಿನಾಚರಣೆ'ಯ ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಿದ್ದರು. ಚಿತ್ತಾಲರು ಸಂದರ್ಶನ, ಆಬೋಲಿನ, ಆಟ, ಬೇನ್ಯಾ, ಆಯ್ದ ಕತೆಗಳು, ಕಥೆಯಾದಳು ಹುಡುಗಿ, ಚಿತ್ತಾಲರ ಕತೆಗಳು, ಕುಮಟೆಗೆ ಬಂದಾ ಕಿಂದರಿಜೋಗಿ, ಓಡಿ ಹೇಣಟಿಜಜಜುಟಿಜಜದಾ ಮುಟ್ಟಿ ಬಂದಾ, ಸಿದ್ಧಾರ್ಥ, ಐವತ್ತೊಂದು ಕತೆಗಳು, ಪುಟ್ಟನ ಹೆಜ್ಜೆ ಕಾಣೋದಿಲ್ಲಾ, ಕೇಣಟಿಜಜಜುಟಿಜಜಳಿ ಕೂಗುವ ಮುನ್ನ, ಸಮಗ್ರ ಕತೆಗಳು ( ಸಂಪುಟ–1 ಮತ್ತು–2 )ಮೂರು ದಾರಿಗಳು, ಶಿಕಾರಿ, ಛೇದ, ಪುರುಷೋತ್ತಮ, ಕೇಂದ್ರ ವೃತ್ತಾಂತ, ದಿಗಂಬರ, ದಣಪೆಯಾಚೆಯ ಓಣಿ, ಸಾಹಿತ್ಯ,ಸೃಜನಶೀಲತೆ ಮತ್ತು ನಾನು, ಸಾಹಿತ್ಯದ ಸಪ್ತಧಾತುಗಳು, ಅಂತಃಕರಣ ಸೇರಿದಂತೆ ಮುಂತಾದ ಕೃತಿಗಳನ್ನು ರಚಿಸಿದ್ದಾರೆ ಎಂದರು.

ಯಶವಂತ ಚಿತ್ತಾಲರಿಗೆ ಅನೇಕ ಪ್ರಶಸ್ತಿ–ಗೌರವ ದೊತೆತಿವೆ. 'ಕಥೆಯಾದಳು ಹುಡುಗಿ' ಎಂಬ ಕೃತಿಗೆ 1983ರ 'ಕೇಂದ್ರ ಸಾಹಿತ್ಯ ಅಕಾಡೆಮಿ' ಪ್ರಶಸ್ತಿ , ಕರ್ನಾಟಕ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಮತ್ತು 'ಮಹಾರಾಷ್ಟ್ರ ಗೌರವ ಪುರಸ್ಕಾರ' ದೊರಕಿದೆ. 'ಶಿಕಾರಿ' ಕಾದಂಬರಿಗೆ 1979ರಲ್ಲಿ ಕರ್ನಾಟಕ ಸಾಹಿತ್ಯ ಅಕಾಡೆಮಿಯ ವಿಶೇಷ ಪ್ರಶಸ್ತಿ ಮತ್ತು 'ವರ್ಧಮಾನ ಪ್ರಶಸ್ತಿ' ದೊರೆತಿದೆ. 'ಪುರುಷೋತ್ತಮ' ಕಾದಂಬರಿಗೆ ಕರ್ನಾಟಕ ಸಾಹಿತ್ಯ ಅಕಾಡೆಮಿಯ ಗೌರವ ಪ್ರಶಸ್ತಿ ಮತ್ತು ಭಾರತೀಯ ಭಾಷಾ ಸಂಸ್ಥಾನದ ಪ್ರಶಸ್ತಿ, 2002ನೇ ಸಾಲಿನ 'ನಿರಂಜನ ಪ್ರಶಸ್ತಿ', ಪಂಪ ಪ್ರಶಸ್ತಿ, ಮಾಸ್ತಿ ಪ್ರಶಸ್ತಿ, ಕರ್ನಾಟಕ ಸಾಹಿತ್ಯ ಅಕಾಡೆಮಿಯ ಗೌರವ ಪ್ರಶಸ್ತಿ, ಶಿವರಾಮ ಕಾರಂತ ಪ್ರಶಸ್ತಿ, ಶ್ರೀ ಗುರುನಾರಾಯಣ ಪ್ರಶಸ್ತಿ, ರಾಜ್ಯೋತ್ಸವ ಪ್ರಶಸ್ತಿ ದೊರೆತಿವೆ. ಕಾರ್ಯಕ್ರಮದಲ್ಲಿ ಕಸಾಪ ಉತ್ತರ ವಲಯದ ಗೌರವ ಅಧ್ಯಕ್ಷ ಶಿವಯೋಗೆಪ್ಪಾ ಎಸ್. ಬಿರಾದಾರ, ಮುಖ್ಯ ಶಿಕ್ಷಕಿ ಚಂಪಾಕಲಾ ನೆಲ್ಲುರೆ ಹಾಗೂ ವಿದ್ಯಾರ್ಥಿಗಳು ಇದ್ದರು.

# ಮಾನವೀಯ ಮೌಲ್ಯಕ್ಕೆ ವಚನ ಸಂಗೀತದ ಕೊಡುಗೆ ಅಪಾರ



ಕಲಬುರಗಿ : ವಚನ ಸಂಗೀತವು ಸಮಾಜದಲ್ಲಿ ಶಾಂತಿ, ಸಮಾನತೆ ಮತ್ತು ಮಾನವೀಯ ಮೌಲ್ಯಗಳನ್ನು ಬಿತ್ತುವ ಸದುದ್ದೇಶ ಹೊಂದಿದೆ ಎಂದು ಸಹಾಯಕ ಪ್ರಾಧ್ಯಾಪಕ ಡಾ.ಸಿದ್ಧಲಿಂಗರೆಡ್ಡಿ ಹೇಳಿದರು.

ನಗರದ ಶಹಾಬಜಾರದ ಸಂಸ್ಥಾನ ಪುರುಷ ಮಠದಲ್ಲಿ ನಡೆದ ಗಾನಜ್ಯೋತಿ ಸಾಂಸ್ಕೃತಿಕ ಕಲಾ ಸಂಸ್ಥೆ ಹಮ್ಮಿಕೊಂಡ ವಚನೋತ್ಸವ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಉದ್ಘಾಟಿಸಿ ಮಾತನಾಡಿದರು. ವಚನ ಸಂಗೀತವು ಕನ್ನಡ ಶರಣರು ರಚಿಸಿದ ವಚನಗಳನ್ನು ರಾಗಬದ್ಧವಾಗಿ ಹಾಡುವ ಸುಂದರವಾದ ಗಾಯನ ಶೈಲಿಯಾಗಿದೆ. ಬಸವಾದಿ ಶರಣರ ವಚನಗಳನ್ನು ಜನರಿಗೆ ತಲುಪಿಸಲು, ವಚನ ಗಾಯನ, ವಚನ ಗ್ರಂಥಗಳ ಮೆರವಣಿಗೆ ಮತ್ತು ಸತ್ಸಂಗಗಳನ್ನು ಹಮ್ಮಿಕೊಳ್ಳುವ ಸಾಂಸ್ಕೃತಿಕ ಹಾಗೂ ಆಧ್ಯಾತ್ಮಿಕ ವೇದಿಕೆಯಾಗಿದೆ ಎಂದರು.

ವೇದಿಕೆ ಮೇಲೆ ರೇವಣಸಿದ್ದಪ್ಪ ಬಿರಾದಾರ, ಚನ್ನಮಲ್ಲಯ್ಯ ಹಿರೇಮಠ, ಮಹಾದೇವಪ್ಪ ಖೂನಿ, ರಾಜಶೇಖರ ಖೂನಿ ಮತ್ತು ಸಂಸ್ಥೆಯ ಅಧ್ಯಕ್ಷ ಪ್ರವೀಣಕುಮಾರ ರುದನೂರ ಇದ್ದರು.

ಹಿರಿಯ ಸಂಗೀತ ಕಲಾವಿದರಾದ ಮಡಿವಾಳಯ್ಯ ಹಿರೇಮಠ, ಸೂರ್ಯಕಾಂತ ಧುತ್ತರಗಾಂವ, ರೇಣುಕಾ ಪ್ರವೀಣಕುಮಾರ, ಗುರುಶಾಂತಯ್ಯ ಸ್ಥಾವರಮಠ, ಪವಿತ್ರಾ ವಿಶ್ವನಾಥ ಅವರಿಂದ ವಿಶೇಷ ಸಂಗೀತ ಕಾರ್ಯಕ್ರಮ ಜರುಗಿತು.



# ಅನಿಲ ಸ್ಫೋಟ: ಮೂವರ ದುರ್ಮರಣ, ನಾಲ್ವರ ಸ್ಥಿತಿ ಗಂಭೀರ

ಯಾದಗಿರಿ: ಜಿಲ್ಲೆಯ ಗುರುಮಠಕಲ್ ತಾಲೂಕಿನ ಕಡೇಚೂರು ಸಮೀಪದ ಬಾಡಿಯಾಳ ಕೈಗಾರಿಕಾ ಪ್ರದೇಶದಲ್ಲಿರುವ ಸೀಲ್ ಲ್ಯಾಬೋರೇಟರಿ ಕಂಪನಿಯಲ್ಲಿ ಇಂದು ಸಂಭವಿಸಿದ ಭೀಕರ ಗ್ಯಾಸ್ ಸ್ಫೋಟದಲ್ಲಿ ಮೂವರು ಕಾರ್ಮಿಕರು ಮೃತಪಟ್ಟಿದ್ದು, ನಾಲ್ವರು ಗಂಭೀರವಾಗಿ ಗಾಯಗೊಂಡಿರುವ ಘಟನೆ ನಡೆದಿದೆ.

ಕಂಪನಿಯೊಳಗೆ ಕೆಲಸ ನಡೆಯುತ್ತಿದ್ದ ವೇಳೆ ಏಕಾಏಕಿ ಗ್ಯಾಸ್ ಸ್ಫೋಟ ಸಂಭವಿಸಿದ್ದು, ಸ್ಫೋಟದ ತೀವ್ರತೆಗೆ ಕಾರ್ಮಿಕರು ಗಂಭೀರವಾಗಿ ಗಾಯಗೊಂಡಿದ್ದಾರೆ. ಒಟ್ಟು ಏಳು ಕಾರ್ಮಿಕರು ದುರಂತಕ್ಕೆ ಒಳಗಾಗಿದ್ದು, ಅವರಲ್ಲಿ ಮೂವರು ಸ್ಥಳದಲ್ಲೇ ಅಥವಾ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ ಎಂದು ಪ್ರಾಥಮಿಕ ಮಾಹಿತಿ ತಿಳಿಸಿದೆ.ಮೃತಪಟ್ಟ ಮೂವರು ಕಾರ್ಮಿಕರೂ ಬಿಹಾರ ಮೂಲದವರಾಗಿದ್ದಾರೆ ಎಂದು ತಿಳಿದುಬಂದಿದೆ. ಗಾಯಗೊಂಡಿರುವ ನಾಲ್ವರನ್ನು ತಕ್ಷಣವೇ ರಾಯಚೂರಿನ ರಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಅವರ ಆರೋಗ್ಯ ಸ್ಥಿತಿ ಗಂಭೀರವಾಗಿದೆ ಎಂದು ವೈದ್ಯಕೀಯ ಮೂಲಗಳು ತಿಳಿಸಿವೆ.

ಘಟನೆ ಕುರಿತು ಮಾಹಿತಿ ತಿಳಿಯುತ್ತಿದ್ದಂತೆ ಪೊಲೀಸರು ಹಾಗೂ ಸಂಬಂಧಿತ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಸ್ಫೋಟಕ್ಕೆ ನಿಖರ ಕಾರಣ ಏನು ಎಂಬುದರ ಕುರಿತು ತನಿಖೆ ಆರಂಭಿಸಲಾಗಿದ್ದು, ಈ ಘಟನೆ ಸೈದಾಪುರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ.

# ಕೋಳಿ ಎಸೆದು ಹರಕೆ ತೀರಿಸಿದ ಭಕ್ತರು



ಚಿತ್ತಾಪುರ; ಸಾವಿರಾರು ಜನಸಾಗರದ ಮಧ್ಯೆ ಪಟ್ಟಣದ ಮರಗಮ್ಮ ದೇವಿಯ ಜಾತ್ರಾ ಮಹೋತ್ಸವವು ಮಂಗಳವಾರ ಸಂಜೆ ಬಹಳ ಅದ್ಧೂರಿಯಾಗಿ ಜರುಗಿತು.

ಜಾತ್ರೆಯಲ್ಲಿ ಎಲ್ಲ ಜಾತಿ ಜನಾಂಗದವರು ಭಕ್ತಿಯಿಂದ ಭಾಗವಹಿಸಿ ದೇವಿಯ ಗೊಂಬೆಗಳ ಮೇಲೆ ಕೋಳಿ ಎಸೆಯುವ ಮೂಲಕ ತಮ್ಮ ಹರಕೆ ಅರ್ಪಿಸಿ ಪುನೀತರಾದರು.

ಮಂಗಳವಾರಸಾಯಂಕಾಲ 6 ಘಂಟೆಗೆ ಮರಗಮ್ಮ ದೇವಿಯ ಗೊಂಬೆಗಳ ಮೆರವಣಿಗೆ ಪ್ರಾರಂಭವಾಗುತ್ತಿದ್ದಂತೆ ಸಾವಿರಾರು ಸಂಖ್ಯೆಯಲ್ಲಿ ಜನ ಸೇರುತ್ತಾರೆ, ತಮ್ಮ ಮನದಾಳದ ಬೇಡಿಕೆಗಳನ್ನು ಈಡೇರಿಕೆಗಾಗಿ ಇಲ್ಲಿಯ ಭಕ್ತರು ಕೋಳಿ ಕೊಡುವ ಹರಕೆ ಮಾಡಿಕೊಳ್ಳುತ್ತಾರೆ.

ಗೊಂಬೆಗಳ ಮೇಲೆ ಕೋಳಿ ಎಸೆದಾಗ ಅದನ್ನು ಹಿಡಿಯಲು ನಾ ಮುಂದು ತಾ ಮುಂದು ಮುಗಿ ಬಿಳುತ್ತಾರೆ. ಒಬ್ಬರ ಕೈಗೆ ಸಿಕ್ಕರೆ ಕೋಳಿ ಉಳಿದಿತ್ತು. ಅದೇ ಕೋಳಿ ಇಬ್ಬರ ಅಥವಾ ಮೂವರ ನಡುವೆ ಸಿಕ್ಕಾಗ ಕೋಳಿಯ ದೇಹ ಚಿದ್ರ ಚಿದ್ರವಾಗುತ್ತದೆ. ಈ ದೃಶ್ಯ ನೋಡುಗರಿಗೆ ನೋವನ್ನು ಉಂಟುಮಾಡುತ್ತದೆ. ಭಕ್ತಾದಿಗಳು ಹರಕೆ ತೀರಿಸಿ ದೇವಿಯ ದರ್ಶನ ಪಡೆದು ಧನ್ಯರಾಗುತ್ತಾರೆ.

ಪಟ್ಟಣದ ಹೋಳಿಕಟ್ಟಾದ ದೇಶಮುಖ ಹಾಗೂ ರೇಷ್ಮೆ ಮನೆಯಿಂದ ದೇವಿಯ ಗೊಂಬೆಗಳಿಗೆ ಬಟ್ಟೆ ತರುವುದು, ಮುಕುಂದ ಬಡಿಗೇರ ಮನೆಯಲ್ಲಿ ಧಾರ್ಮಿಕ ವಿಧಿ ವಿಧಾನಗಳ ಮೂಲಕ ಗೊಂಬೆಗಳ ಪೂಜೆ ಕಾರ್ಯ ನೆರವೇರಿತ್ತು. ಇಲ್ಲಿ ಮಹಿಳೆಯರು, ಸಾರ್ವಜನಿಕರು ಪೂಜೆ ಸಲ್ಲಿಸುತ್ತಾರೆ. ನಂತರ ಮನೆಯಿಂದ ಪ್ರಾರಂಭವಾದ ಮೆರವಣಿಗೆ ಹನುಮಾನ ಮಂದಿರ ರಸ್ತೆ, ಶಿಶು ವಿಹಾರ ಶಾಲೆಯ ರಸ್ತೆ ಮೂಲಕ ದೇವಸ್ಥಾನಕ್ಕೆ ತಲುಪಿತು. ಮೆರವಣಿಗೆ ಉದ್ದಕ್ಕೂ ಭಕ್ತರು ನೂರಾರು ಕೋಳಿಗಳು ಎಸೆಯುವುದೇ ನೋಡುಗರ ಕಣ್ಮನ ಸೆಳೆಯುತ್ತದೆ. ಮೆರವಣಿಗೆಯಲ್ಲಿ ಜನಪ್ರತಿನಿಧಿಗಳು, ಮಹಿಳೆಯರು, ರಾಜಕೀಯ ಮುಖಂಡರು, ಅಧಿಕಾರಿಗಳು, ಯುವಕರು ಹೀಗೆ ಎಲ್ಲರು ಶ್ರದ್ಧಾ ಭಕ್ತಿ ಭಾವನೆಯಿಂದ ಭಾಗಹಿಸುತ್ತಾರೆ.



### 10 ಕೋಟಿ ನಶಾಮುಕ್ತ ಮಹಾ ಅಭಿಯಾನ ಕಾರ್ಯಕ್ರಮ ಉದ್ಘಾಟಿಸಿದ ಶಂಕರರಾವ ದೇಶಮುಖ ಅಭಿಮತ

# ಒಬ್ಬ ವ್ಯಕ್ತಿ ನಶೆಯಿಂದ ಮುಕ್ತನಾದರೆ ಒಂದು ಕುಟುಂಬ ಉಳಿಯುತ್ತದೆ

■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ಒಬ್ಬ ವ್ಯಕ್ತಿ ನಶೆಯಿಂದ ಮುಕ್ತನಾದರೆ ಒಂದು ಕುಟುಂಬ ಉಳಿಯುತ್ತದೆ. ಒಂದು ಕುಟುಂಬ ಉಳಿದರೆ ಸಮಾಜ ಸದೃಢವಾಗುತ್ತದೆ;

ಸಮಾಜ ಸದೃಢವಾದರೆ ರಾಷ್ಟ್ರ ಸಶಕ್ತವಾಗುತ್ತದೆ ಎಂದು ಶಂಕರರಾವ ದೇಶಮುಖ ಹೇಳಿದರು. ನಗರದ ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರಿಯ ವಿಶ್ವವಿದ್ಯಾಲಯದ ಓಂ ಶಾಂತಿ ಭವನದಲ್ಲಿ ಭಾರತ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ, ರಾಜ್ಯ ಸರ್ಕಾರ ಮತ್ತು ಮಾದಕ ದ್ರವ್ಯ ನಿಯಂತ್ರಣ ಮಂಡಳಿ ಹಾಗೂ ಬ್ರಹ್ಮಾಕುಮಾ–ರಿಸ್ ಸಹಯೋಗದಲ್ಲಿ ಹಮ್ಮಿಕೊಂಡ 10 ಕೋಟಿ ನಶಾಮುಕ್ತ ಮಹಾ ಅಭಿಯಾನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ನಶೆ ಕ್ಷಣಿಕ ಸುಖ ನೀಡಬಹುದು ಆದರೆ ಶಾಶ್ವತ ದುಃಖವನ್ನೇ ಉಡುಗೊರೆಯಾಗಿ ಕೊಡುತ್ತದೆ ಸಂಯಮವೇ ಜೀವನದ ನಿಜವಾದ ಶಕ್ತಿ ಎಂದರು. ಅತಿಥಿಯಾಗಿ ಮಾತನಾಡಿದ ಇನ್ನರ್ ವಿಲ್ ಕ್ಲಬ್ ಮಾಜಿ ಅಧ್ಯಕ್ಷೆ ನಾಗರತ್ನ ಮನಗೂಳಿ ಯುವಕರ ಕೈಯಲ್ಲಿ ಮಾದಕ ವಸ್ತು ಬದಲಾಗಿ, ಪುಸ್ತಕ ಇರಲಿ, ಮನದಲ್ಲಿ ವ್ಯಸನದ ಬದಲು ಗುರಿ ಇರಲಿ ಆಗ ಮಾತ್ರ ಭಾರತ ವಿಶ್ವಕ್ಕೆ ಮಾದರಿಯಾಗಲಿದೆ. ನಶಾಮುಕ್ತ ಭಾರತ ಕೇವಲ ಒಂದು ಅಭಿಯಾನವಲ್ಲ, ಅದು ಆರೋಗ್ಯ, ಸಂಸ್ಕಾರ ಮತ್ತು ಸುಂದರ ಭವಿಷ್ಯದ ಸಂಕಲ್ಪವಾಗಿದೆ ಎಂದರು.

ಈ ಸಂದರ್ಭದಲ್ಲಿ ನಗರದ ಬ್ರಹ್ಮಕುಮಾರಿಸ್ ಸಂಸ್ಥೆಯ ಸಂಚಾಲಕಿ ಪವಿತ್ರ ಅಕ್ಕನವರು ಪ್ರತಿಜ್ಞೆಯ ಸಾಲುಗಳನ್ನು ಬೋಧಿಸಿದರು.

ಕಾರ್ಯಕ್ರಮದ ಅಭಿಯಾನದಲ್ಲಿ ವಿಶ್ರಾಂತ ಪ್ರಾಚಾರ್ಯ ಬಿ ಜಿ ಪಾಟೀಲ, ಬಿ ಎನ್ ಬಿ ಫೌಂಡೇಶನ್ ಅಧ್ಯಕ್ಷ ಶ್ರೀಶೈಲಗೌಡ ಬಿರಾದಾರ ಮಾತನಾಡಿದರು. ಈ ಸಂದರ್ಭದಲ್ಲಿ ಎಸ್ ಎಸ್ ಬುಳ್ಳಾ, ಅಂಬರೀಶ ಯತ್ನಾಳ ಕೆ ಎಸ್ ಪತ್ತಾರ, ಎಸ್ ಎಸ್ ಪಾಟೀಲ, ಎಂ ಎಂ ದೊಡ್ಡಮನಿ, ಎಸ್ ವೈ ಬಿರಾದಾರ , ಪ್ರಮೀಳಾ ಪಾಟೀಲ, ಸೀಮಾ ಉಡಚಣ, ಖುಷಿ ಕೆಂಭಾವಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಮಹಿಳಾ ವಿವಿ ಪತ್ರಿಕೋದ್ಯಮ ವಿಭಾಗದ ಪ್ರವೇಶಕ್ಕೆ ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದಲ್ಲಿ 2026–27ನೆಯ ಶೈಕ್ಷಣಿಕ ಸಾಲಿನ ಸ್ನಾತಕೋತ್ತರ ಪದವಿ (ಎಂಎ), ವ್ಯಾಲ್ಯು ಆಡೆಡ್ ಡಿಪ್ಲೋಮಾ ಕೋರ್ಸ್ಗಳ ಪ್ರಥಮ ವರ್ಷದ ಪ್ರವೇಶಕ್ಕಾಗಿ ಅರ್ಹ ಅಭ್ಯರ್ಥಿಗಳಿಂದ ಯುಯುಸಿಎಂಎಸ್ ತಂತ್ರಾಂಶದ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಆಹ್ವಾನಿಸಲಾಗಿದ್ದು ಅರ್ಜಿ ಸಲ್ಲಿಕೆ ಅವಧಿಯನ್ನು ಆಗಸ್ಟ್ 17ರವರೆಗೆ ವಿಸ್ತರಿಸಲಾಗಿದೆ

ಸ್ನಾತಕ ಪದವಿಯ 6ನೆಯ ಸೆಮಿಸ್ಟರ್ ಪರೀಕ್ಷಾ ಫಲಿತಾಂಶಕ್ಕಾಗಿ ಕಾಯುವ ಅಗತ್ಯವಿಲ್ಲ. ಐದು ಸೆಮಿಸ್ಟರ್‌ಗಳ ಅಂಕಪಟ್ಟಿಯೊಂದಿಗೆ ಈಗಲೇ ಅರ್ಜಿ ಸಲ್ಲಿಸಿ. ಪರೀಕ್ಷಾ ಫಲಿತಾಂಶ ಬಂದ ನಂತರ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗಾಗಿ ಆಯಾ ವಿಭಾಗಗಳಿಗೆ 6ನೆಯ ಸೆಮಿಸ್ಟರ್ ಅಂಕಪಟ್ಟಿ ಸಲ್ಲಿಸಬಹುದಾಗಿದೆ. ಅಭ್ಯರ್ಥಿಗಳು ಆಗಸ್ಟ್ 1ರಿಂದ ಆಗಸ್ಟ್ 17ರವರೆಗೆ ಯುಯುಸಿಎಂಎಸ್ https://uucms.karnataka.gov.in/Login/Index ತಂತ್ರಾಂಶದಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಆನ್‌ಲೈನ್ ಮೂಲಕ ಸಲ್ಲಿಸಿರುವ ಅರ್ಜಿಯ ಪ್ರತಿಯನ್ನು ಪತ್ರಿಕೋದ್ಯಮದ ವಿಭಾಗದ ಕಚೇರಿ ಅಥವಾ ವಿಶ್ವವಿದ್ಯಾನಿಲಯದ ಕಚೇರಿಗೆ ಆಗಸ್ಟ್ 17ರೊಳಗೆ ಸಲ್ಲಿಸಬೇಕು. ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ. ಅರ್ಹ ಅಭ್ಯರ್ಥಿಗಳಿಗೆ ಆಗಸ್ಟ್ ಆಗಸ್ಟ್ 19 ರಿಂದ 21ರವರೆಗೆ ವಿಶ್ವವಿದ್ಯಾನಿಲಯದಲ್ಲಿ ಕೌನ್ಸೆಲಿಂಗ್ ನಡೆಯಲಿದೆ. ವಿದ್ಯಾರ್ಥಿನಿಯರ ಆಯ್ಕೆಯನ್ನು ಮೆರಿಟ್ ಹಾಗೂ ರೋಸ್ಟರ್ ಆಧಾರದ ಮೇಲೆ ನಡೆಸಿ, ಕೌನ್ಸೆಲಿಂಗ್ ಮೂಲಕ ಪ್ರವೇಶ ನೀಡಲಾಗುವುದು. ಇಡೀ ರಾಜ್ಯದ ವ್ಯಾಪ್ತಿಯನ್ನು ಹೊಂದಿರುವ ಮಹಿಳಾ ವಿಶ್ವವಿದ್ಯಾಲಯದಲ್ಲಿ ಪ್ರವೇಶ ಪಡೆಯಲು ರಾಜ್ಯದ ಯಾವುದೇ ವಿಶ್ವವಿದ್ಯಾಲಯದ ವ್ಯಾಪ್ತಿಯ ಕಾಲೇಜುಗಳಲ್ಲಿ ಪದವಿ (ಬಿ.ಎ., ಬಿಎಸ್ಸಿ, ಬಿ.ಕಾಂ) ಪಡೆದಿರುವ ವಿದ್ಯಾರ್ಥಿನಿಯರು ಅರ್ಹರು.

ಎರಡು ವರ್ಷಗಳ ಎಂ.ಎ.ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ಕೋರ್ಸ್ ಮುಗಿಸಿ ಹೊರ ಬರುವ ವಿದ್ಯಾರ್ಥಿನಿಯರಿಗೆ ಉದ್ಯೋಗಾವಕಾಶಗಳು ವಿಪುಲವಾಗಿವೆ. ಪತ್ರಿಕೆಗಳು, ಟಿ.ವಿ, ರೇಡಿಯೋ, ಕಾರ್ಪೋರೇಟ್ ವಲಯ, ಜಾಹಿರಾತು ಕ್ಷೇತ್ರ, ರಾಜ್ಯ ಹಾಗೂ ಕೇಂದ್ರ ಸರಕಾರಗಳ ವಿವಿಧ ಇಲಾಖೆಗಳಲ್ಲಿ ನೌಕರಿಗಳಿಗೆ ಅರ್ಹರಾಗುತ್ತಾರೆ. ವಿದ್ಯಾರ್ಥಿನಿಯರನ್ನು ವಿಶೇಷವಾಗಿ ಎಲೆಕ್ಟ್ರಾನಿಕ್ ಮಾಧ್ಯಮದಲ್ಲಿ ತರಬೇತಿಗೊಳಿಸುವ ಉದ್ದೇಶದಿಂದ ವಿಶ್ವವಿದ್ಯಾಲಯದ ಪತ್ರಿಕಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದಲ್ಲಿ ಅತ್ಯಾಧುನಿಕ ಹಾಗೂ ಸುಸಜ್ಜಿತ ಆಡಿಯೋ–ವಿಡಿಯೋ ಪ್ರೊಡಕ್ಷನ್ ಸ್ಟುಡಿಯೋ ಸ್ಥಾಪಿಸಲಾಗಿದೆ ಎಂದು ವಿವಿ ಪ್ರಕಟಣೆ ತಿಳಿಸಿದೆ. ಈ ವಿಶ್ವವಿದ್ಯಾಲಯದಲ್ಲಿ ಪ್ರವೇಶ ಪಡೆಯುವ ವಿದ್ಯಾರ್ಥಿನಿಯರಿಗೆ ಸರ್ಕಾರಿ ಶಿಷ್ಯವೇತನ, ಹಾಸ್ಟೆಲ್ ಸೌಲಭ್ಯ, ಸುಸಜ್ಜಿತ ಗ್ರಂಥಾಲಯ, ಮಲ್ಟಿಮೀಡಿಯಾ ಪ್ರಯೋಗಾಲಯ ಸೌಲಭ್ಯಗಳನ್ನು ಕಲ್ಪಿಸಲಾಗಿದೆ.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿನಿಯರಿಗೆಯಾವುದೇಪ್ರವೇಶಶುಲ್ಕವಿರುವುದಿಲ್ಲ (ಸರ್ಕಾರದಿಂದ ಶುಲ್ಕ ಮರುಪಾವತಿಯಾದ ನಂತರ ಆ ಮೊತ್ತವನ್ನು ವಿವಿಗೆ ಜಮಾ ಮಾಡಬೇಕು). ಅಲ್ಲದೇ ಉಚಿತ ಲ್ಯಾಪ್‌ಟಾಪ್ ನೀಡಲಾಗುವುದು. ಹೆಚ್ಚಿನ ವಿವರಗಳಿಗಾಗಿ ಮುಖ್ಯಸ್ಥರು, ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗ, ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ ವಿಜಯಪುರ ಅವರನ್ನು ಖುದ್ದಾಗಿ ಇಲ್ಲವೇ ದೂರವಾಣಿ ಸಂಖ್ಯೆ: 9449182091, 9482248372 ಮತ್ತು 9844681398 ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.



# ಸ್ವಾತಂತ್ರ್ಯ ದಿನಾಚರಣೆ ಅರ್ಥಪೂರ್ಣ ಆಚರಣೆಗೆ ಸೂಚನೆ

■ ಉದಯರಶ್ಮಿ ದಿನಪತ್ರಿಕೆ

ಚಡಚಣ: ಆ.15ರಂದು ಆಯೋಜಿಸುವ 80 ನೇ ಸ್ವಾತಂತ್ರ್ಯೋತ್ಸವದ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಹಾಗೂ ಅದ್ದೂರಿಯಾಗಿ ಆಚರಿಸುವ ಹಿನ್ನೆಲೆ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳುವಂತೆ ಎಲ್ಲಾ ಇಲಾಖೆಗಳ ಅಧಿಕಾರಿಗಳು ಅಗತ್ಯ ಸಿದ್ದತೆ ಕೈಗೊಳ್ಳುವಂತೆ ತಹಶೀಲ್ದಾರ ಸಂ–ಜಯ ಇಂಗಳೆ ಸೂಚನೆ ನೀಡಿದರು. ತಹಶೀಲ್ದಾರ್ ಕಾರ್ಯಾಲಯದ ಸಭಾಂಗಣದಲ್ಲಿ ಮಂಗಳವಾರ ನಡೆದ ಸ್ವಾತಂತ್ರೋತ್ಸವದ ಪೂರ್ವಭಾವಿ ಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸ್ವಾತಂತ್ರೋತ್ಸವದ ದಿನಾಚರಣೆ ಪ್ರಯುಕ್ತ ಆ.15ರಂದು ಬೆಳಗ್ಗೆ 8:30 ಕ್ಕೆ ಪಟ್ಟಣದ ಶ್ರೀ ಸಂಗಮೇಶ್ವರ ಶಾಲಾ ಕಾಲೇಜ ಆವರಣದಲ್ಲಿ ಧ್ವಜಾರೋಹಣ ಕಾರ್ಯಕ್ರಮ ನಡೆಯಲಿದೆ ಎಂದರು. ಮುಖ್ಯ ವೇದಿಕೆ ಧ್ವಜಾರೋಹಣ ಕಾರ್ಯಕ್ರಮಕ್ಕೆ ಎಲ್ಲ ಅಧಿಕಾರಿಗಳು ತಮ್ಮ ಸಿಬ್ಬಂದಿಯೊಂದಿಗೆ ಕಡ್ಡಾಯವಾಗಿ ಹಾಜರಿರುವಂತೆ ಸೂಚಿಸಿದರಲ್ಲದೆ, ಸರ್ಕಾರದ ಶಿಷ್ಟಾಚಾರವನ್ನು ಚಾಚೂ ತಪ್ಪದೆ ಪಾಲಿಸಿ ಕಾರ್ಯಕ್ರಮ ವ್ಯವಸ್ಥಿತವಾಗಿ ಆಯೋಜಿಸಬೇಕು ಎಂದು ನಿರ್ದೇಶನ ನೀಡಿದರು.

ಪಟ್ಟಣದ ಪ್ರಮುಖ ಬೀದಿ ಹಾಗೂ ವೃತ್ತಗಳ ಸ್ವಚ್ಛತೆ ಕುರಿತು ಪ.ಪಂ.ಮುಖ್ಯಾಧಿಕಾರಿಗಳು ನಿಗಾ ವಹಿಸಬೇಕು. ಕುಡಿಯುವ ನೀರು, ಸ್ವಾತಂತ್ರ್ಯ ಚಳುವಳಿಯ ಮಹತ್ವ ಸಾರುವ ವಿಭಿನ್ನ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು ಸೇರಿದಂತೆ ಕಾರ್ಯಕ್ರಮದ ವೇದಿಕೆ ವ್ಯವಸ್ಥೆ ಕುರಿತು ಅಧಿಕಾ–ರಿಗಳು ಹಾಗೂ ಪಟ್ಟಣದ ವಿವಿಧ ಸಂಘಟನೆಯ ಗಣ್ಯರೊಂದಿಗೆ ಚರ್ಚಿಸಲಾಯಿತು.

ಇದೆ ಸಂದರ್ಭದಲ್ಲಿ ವಿವಿಧ ವೃತ್ತಿಯಲ್ಲಿ ಸಾಧನೆಗೈದ ಮಹನೀಯರನ್ನು ಗುರುತಿಸಿ ಸನ್ಮಾನಿಸಲು ಕ್ರಮ ಕೈಗೊಳ್ಳುವಂತೆ ಹೇಳಿದರು.

ಪ.ಪಂ.ಮುಖ್ಯಾಧಿಕಾರಿ ಬಾಬಾಸಾಹೇಬ ತಾವಸೆ, ತಾ.ಪಂ.ಅಧಿಕಾರಿ ಅಶೋಕಕುಮಾರ ರಾಠೋಡ, ಹೆಸ್ಕಾಂ ಕಾರ್ಯನಿರ್ವಾಹಕ ಅಭಿಯಂತರ ವಿಜಯಕುಮಾರ ಹವಾಲ್ದಾರ, ಸಿಡಿಪಿಓ ಸಾಹೇಬಗೌಡ ಜುಂಜರವಾಡ, ಬಿಇಓ ಎಚ್.ನಾಗೇಂದ್ರಪ್ಪ, ಪ.ಪಂ.ಸದಸ್ಯರು ಸೇರಿದಂತೆ, ಕಂದಾಯ ನೀರಿಕ್ಷಕ, ಶಿರಸ್ತೇದಾರ ಆರ್.ಎಸ್. ಚವ್ಹಾಣ, ಸುನೀಲ ಚವ್ಹಾಣ, ಆಹಾರ ನಿರೀಕ್ಷಕ ಶಿವಾನಂದ ಕೋಳಿ, ವಿವಿಧ ಇಲಾಖಾ ಅಧಿಕಾ–ರಿಗಳು ಉಪಸ್ಥಿತರಿದ್ದರು.

# ಕೋಪದ ಆವೇಶದಲ್ಲಿ ಉಂಟುಮಾಡುವ ಒಂದೊಂದು ಕಲೆಗಳೂ ಜೀವನದುದ್ದಕ್ಕೂ ನಮ್ಮನ್ನು ಕಾಡುತ್ತಿರುತ್ತವೆ

ಒಂದು ಊರಿನಲ್ಲಿ ಅತ್ಯಂತ ಚೂಟಿಯಾದ ಒಬ್ಬ ಹುಡುಗನಿದ್ದ. ಆತನಿಗೆ ಮೂಗಿನ ತುದಿಯಲ್ಲೇ ಕೋಪವಿತ್ತು. ಆತನಿಗೆ ಕೋಪ ನೆತ್ತಿಗೇರಿದಾಗ ಗೆಳೆಯರು, ಮನೆಯ ಸದಸ್ಯರು, ಹಿರಿಯರು ಮತ್ತು ಕಿರಿಯರೆನ್ನುವ ವ್ಯತ್ಯಾವಿಲ್ಲದೇ ಕೆಟ್ಟದಾಗಿ ಬೈಯುತ್ತಿದ್ದ. ಇದರಿಂದ ಆತನ ಮೇಲೆ ಸುತ್ತಮುತ್ತಲಿರುವ ಎಲ್ಲರಿಗೂ ಬಹಳ ಬೇಸರವಿತ್ತು. ಈತನ ಕೋಪದ ಪ್ರಖರತೆಯನ್ನು ತಡೆಯಲಾಗದೇ ಆ ಹುಡುಗನ ತಾಯಿಯು ಮಗನ ಸಿಟ್ಟಿನ ಕುರಿತು 'ನಿಮ್ಮ ಮಗನ ಸಿಟ್ಟು ಹೀಗೇ ಮುಂದುವರಿದರೆ ಅವನ ಜೊತೆ ಯಾರೂ ಸೇರೋದಿಲ್ಲ. ಆದ್ದರಿಂದ ಅವನ ಕೋಪವನ್ನು ಹೇಗಾದರೂ ಕಡಿಮೆ ಮಾಡಿಸಲೇಬೇಕು' ಎಂದು ತನ್ನ ಗಂಡನಲ್ಲಿ ಹೇಳಿದಳು.

ಅಪ್ಪ ಮರುದಿನ ಮಗನನ್ನು ಕರೆದು 'ನಿನ್ನ ಕೋಪವನ್ನು ನೀನು ಕಡಿಮೆ ಮಾಡಿಕೊಳ್ಳಬೇಕು. ಕೋಪ ಇದೇ ರೀತಿ ಮುಂದುವರಿದರೆ ನಿನ್ನ ಬದುಕೇ ಹಾಳಾಗುತ್ತದೆ' ಎಂತು ಬುದ್ಧಿ ಹೇಳಿದರು. 'ಇನ್ನು ಮುಂದಕ್ಕೆ ನಿನಗೆ ಕೋಪ ಬಂದಾಗಲೆಲ್ಲಾ ನೀನು ಒಂದೊಂದು ಕಬ್ಬಿಣದ ಮೊಳೆಯನ್ನು ತಗೆದುಕೊಂಡು ನಮ್ಮ ಮನೆಯ ಆವರಣದ ಗೋಡೆಗೆ ಹೊಡೆಯಬೇಕು. ಆಗಲಾದರೂ ನಿನ್ನ ಕೋಪವು ಕಡಿಮೆಯಾಗಲಿ' ಎಂದು ತಂದೆಯು ಉಪಾಯವನ್ನು ಹೇಳಿಕೊಟ್ಟರು. ಅದೇ ರೀತಿಯಾಗಿ ಕೋಪ ಬಂದಾಗಲೆಲ್ಲಾ ಗೋಡೆಗೆ ಮೊಳೆಯನ್ನು ಹೊಡೆಯಲಾರಂಭಿಸಿದ. ಮೊದಲ ದಿನ ಆತನು ಗೋಡೆಗೆ ಒಟ್ಟು 42 ಮೊಳೆಗಳನ್ನು ಹೊಡೆದ. ಎರಡನೇ ದಿನ 35, ಮೂರನೇ ದಿನಕ್ಕೆ 22 ಮೊಳೆಗಳನ್ನು ಹೊಡೆದಿದ್ದ. ಹೀಗೇ ದಿನದಿಂದ ದಿನಕ್ಕೆ ಆತನ ಕೋಪವೂ ಕಡಿಮೆಯಾಗಿ ಅವನು ಗೋಡೆಗೆ ಹೊಡೆಯುವ ಮೊಳೆಗಳ ಸಂಖ್ಯೆಯೂ ಕಡಿಮೆ ಆಯಿತು. ಕೊನೆಗೆ ಒಂದು ದಿನ ಪೂರ್ತಿ ಆತನಿಗೆ ಕೋಪವೇ ಬರದೇ ಆತ ಒಂದೇ ಒಂದು ಮೊಳೆಯನ್ನೂ ಹೊಡೆಯದಿರುವಷ್ಟು ಶಾಂತ ಸ್ವಭಾವದವನಾಗಿ ಬದಲಾಗಿದ್ದ. ಆ ದಿನ ಹುಡುಗ ತನ್ನ ಅಪ್ಪನ ಬಳಿ ಹೋಗಿ ತನ್ನ ಕೋಪ ಪೂರ್ತಿ ಕಡಿಮೆ ಆಗಿರುವ ವಿಚಾರವನ್ನು ತಿಳಿಸಿದ.

ಆಗ ಆತನ ಅಪ್ಪನು ಹುಡುಗನಿಗೆ ನೀನು ಈಗಾಗಲೇ ಗೋಡೆಗೆ ಹೊಡೆದಿರುವ ಅಷ್ಟೂ ಮೊಳೆಗಳನ್ನು ಒಂದೊಂದಾಗಿ ಕೀಳಲು ಹೇಳುತ್ತಾರೆ. ಅದರಂತೆ ಹುಡುಗ ಗೋಡೆಗೆ ಹೊಡೆದಿದ್ದ ಎಲ್ಲಾ ಮೊಳೆಗಳನ್ನು ಕಿತ್ತು ಅಪ್ಪನ ಬಳಿ ಬರುತ್ತಾನೆ. ಆಗ ಅಪ್ಪ ಮಗನನ್ನು ಆ ಕಾಂಪೌಂಡಿನ ಬಳಿ ಕರೆದುಕೊಂಡು ಹೋಗಿ ಆ ಗೋಡೆಯನ್ನು ನೋಡಲು ಹೇಳುತ್ತಾರೆ. ಅಂದು ಅಂದವಾಗಿದ್ದ ಆ ಗೋಡೆಯ ಮೇಲೆ ಎಲ್ಲೆಲ್ಲೂ ಕೇವಲ ತೂತುಗಳೇ ಇದ್ದವು. ಅಲ್ಲಿದ್ದ ತೂತುಗಳನ್ನು ತೋರಿಸುತ್ತಾ 'ನೋಡು ಮಗನೇ, ನೀನು ಕೋಪ ಬಂದಾಗಲೆಲ್ಲ ಈ ರೀತಿ ಮೊಳೆಯನ್ನು ಗೋಡೆಗೆ ಹೊಡೆದಂತೆಯೇ ನೀನು ಎಲ್ಲರ ಮೇಲೆ ರೇಗಾಡುತ್ತಿದ್ದೆ. ಆ ನಂತರದಲ್ಲಿ ಮೊಳೆಯನ್ನು ವಾಪಾಸ್ ಕಿತ್ತಂತೆ ನೀನು ಹೋಗಿ ಅವರಲ್ಲೆಲ್ಲಾ ಕ್ಷಮೆಯನ್ನೂ ಕೇಳಬಹುದು. ಆದ–'ರೆ ಈ ಗೋಡೆಯಲ್ಲಿ ತೂತುಗಳು ಮಾತ್ರ ಶಾಶ್ವತವಾಗಿ ಉಳಿಯುವಂತೆ ನಿನ್ನ ಬೈಗುಳದಿಂದ ಜನರಿಗಾಗಿರುವ ಬೇಸರವು ಅವರ ಮನಸಿನಲ್ಲಿ ಹಾಗೇ ಉಳಿದಿರುತ್ತದೆ ಎಂದರು.

ಮಗನಿಗೆ ತನ್ನ ತಪ್ಪಿನ ಅರಿವಾಗಿ ಆತನ ಕೋಪವೂ ಮಾಯವಾಗಿತ್ತು. ಈಗ ಆತ ಹೊಸ ಹುಡುಗ, ಹೊಸ ಮನಸ್ಸಿನ ಮಗ ಎಲ್ಲರ ಪ್ರೀತಿಯ ಗೆಳೆಯನಾಗಿ ಬದಲಾಗಿದ್ದ. 'ಕೋಪದಲ್ಲಿ ಯಾರ ಮೇಲೂ ರೇಗಾಡಬಾರದು. ನಂತರದಲ್ಲಿ ಎಲ್ಲವೂ ಸರಿ ಹೋದರೂ, ಆ ಮಾತಿನ ಕಲೆಗಳು ಮಾತ್ರ ಇತರರ ಮನಸ್ಸಿನಲ್ಲಿ ಅಚ್ಚಳಿಯದೆ ಉಳಿದುಬಿಡುತ್ತದೆ' ಕೋಪದ ಕೈಯಲ್ಲಿ ಯಾವತ್ತೂ ಮನಸ್ಸನ್ನು ಕೊಡಬಾರದು. ಕೋಪದಲ್ಲಿ ಹೊಡೆಯುವ ಒಂದೊಂದು ಮೊಳೆಗಳೂ ಜೀವನದುದ್ದಕ್ಕೂ ಶಾಶ್ವತವಾಗಿ ಉಳಿದುಬಿಡುತ್ತವೆ.

# ಸಂಶೋಧನೆಯೇ ಸತ್ಯದ ಅನ್ವೇಷಣೆ :ಡಾ.ಮಹೇಶ ಚಿಂತಾಮಣಿ

■ ಉದಯರಶ್ಮಿ ದಿನಪತ್ರಿಕೆ



ಬಾಗಲಕೋಟೆ (ಜಮಖಂಡಿ): "ಸಂಶೋಧನೆ ಎಂದರೆ ಕೇವಲ ಪದವಿ ಪಡೆಯುವ ಸಾಧನವಲ್ಲ; ಅದು ಸತ್ಯದ ಅನ್ವೇಷಣೆಯ ಮೂಲಕ ಸಮಾಜಕ್ಕೆ ಹೊಸ ಜ್ಞಾನವನ್ನು ನೀಡುವ ಸೃಜನಾತ್ಮಕ ಪ್ರಕ್ರಿಯೆ" ಎಂದು ಕರ್ನಾಟಕ ರಾಜ್ಯ ಅಕ್ಕಮಹಾದೇವಿ ವಿಶ್ವವಿದ್ಯಾಲಯ, ವಿಜಯಪುರದ ಕನ್ನಡ ವಿಭಾಗದ ಪ್ರಾಧ್ಯಾಪಕರಾದ ಡಾ. ಮಹೇಶ ಚಿಂತಾಮಣಿ ಅಭಿಪ್ರಾಯಪಟ್ಟರು.

ಜಮಖಂಡಿಯ ಸರಕಾರಿ ಪ್ರಥಮ ದರ್ಜೆ ಮಹಿಳಾ ಮಹಾವಿದ್ಯಾಲಯ ಹಾಗೂ ಸ್ನಾತಕೋತ್ತರ ಕೇಂದ್ರದ ಕನ್ನಡ ವಿಭಾಗ ಆಯೋಜಿಸಿದ್ದ "ಕನ್ನಡ ಸಂಶೋಧನೆಯ ವಿಧಿ–ವಿಧಾನಗಳು" ಕುರಿತ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಅವರು ಮಾತನಾಡಿದರು.

"ಸಂಶೋಧನೆ ಮಾನವನ ಸಹಜ ಪ್ರವೃತ್ತಿ. ಸತ್ಯದ ಅನ್ವೇಷಣೆಯೇ ಸಂಶೋಧನೆಯ ಮೂಲ ಆಶಯ. ಸಂಶೋಧನೆಯ ಶಕ್ತಿಯಿಂದಲೇ ಇಂದು ಮನುಷ್ಯ ಮಂಗಳ ಗ್ರಹದ ಅಂಗಳದವರೆಗೂ ತನ್ನ ಹೆಜ್ಜೆ ಇಟ್ಟಿದ್ದಾನೆ. ಸಾಹಿತ್ಯ ಕ್ಷೇತ್ರದಲ್ಲಿಯೂ ಸಂಶೋಧನೆಯಿಂದ ಅನೇಕ ಅಪರೂಪದ ಕೃತಿಗಳು ಬೆಳಕಿಗೆ ಬಂದಿವೆ. ವಿದ್ಯಾರ್ಥಿಗಳು ಆಸಕ್ತಿ, ಅವಧಾನ, ಪರಿಶ್ರಮ ಮತ್ತು ತ್ಯಾಗದ ಮನೋಭಾವದಿಂದ ಸಂಶೋಧನಾ ಕ್ಷೇತ್ರಕ್ಕೆ ಕಾಲಿಟ್ಟಾಗ ಮಾತ್ರ ಹೊಸ ಸಾಧ್ಯತೆಗಳು ಅನಾವರಣಗೊಳ್ಳುತ್ತವೆ" ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ಸುನಂದಾ ಎಸ್. ಶಿರೂರ ಮಾತನಾಡಿ, "ರಾಷ್ಟ್ರೀಯ ಶಿಕ್ಷಣ ನೀತಿಯು ಸಂಶೋಧನೆಗೆ ವಿಶೇಷ ಆದ್ಯತೆ ನೀಡುತ್ತಿದೆ. ಉನ್ನತ ಶಿಕ್ಷಣದಲ್ಲಿ ಸಂಶೋಧನೆ ಕೈಗೊಳ್ಳುವವರಿಗೆ ಸಾಕಷ್ಟು ಅವಕಾಶಗಳಿದ್ದರೂ ವಿದ್ಯಾರ್ಥಿಗಳು ಗುಣಮಟ್ಟದ ಸಂಶೋಧನೆಯತ್ತ ಹೆಚ್ಚು ಗಮನ ಹರಿಸಬೇಕಿದೆ. ಓದಿನ ವ್ಯಾಪ್ತಿ ಹೆಚ್ಚಿದಾಗ, ವಿಮರ್ಶಾತ್ಮಕ ಹಾಗೂ ಚಿಕಿತ್ಸಕ ಚಿಂತನೆ ಬೆಳೆದಾಗ ಮಾತ್ರ ಸಮಾಜಮುಖಿ ಮತ್ತು ಮೌಲಿಕ ಸಂಶೋಧನಾ ಕೃತಿಗಳು ರೂಪುಗೊಳ್ಳುತ್ತವೆ" ಎಂದು ತಿಳಿಸಿದರು.

ಕನ್ನಡ ವಿಭಾಗದ ಸಂಯೋಜಕರಾದ ಡಾ. ವಾಯ್. ವಾಯ್. ಕೊಕ್ಕನವರ ಸ್ವಾಗತಿಸಿ ಕಾರ್ಯಕ್ರಮದ ಉದ್ದೇಶವನ್ನು ವಿವರಿಸಿದರು. ಕನ್ನಡ ವಿಭಾಗದ ಮುಖ್ಯಸ್ಥರಾದ ಕು. ಲಕ್ಷ್ಮೀ ಖವಾಸಿ ಹಾಗೂ ಸಂಗಡಿಗರು ಪ್ರಾರ್ಥನೆ ನೆರವೇರಿಸಿದರು. ಭಾಗ್ಯಶ್ರೀ ಮುಗಳಖೋಡ ಕಾರ್ಯಕ್ರಮ ನಿರೂಪಿಸಿ, ಶ್ರೀಮತಿ ಸುಮ. ವೈ.ಎನ್. ವಂದಿಸಿದರು.

> "ಸಂಶೋಧನೆ ಎಂದರೆ ಉತ್ತರಗಳನ್ನು ಹುಡುಕುವುದು ಮಾತ್ರವಲ್ಲ; ಸಮಾಜದ ಭವಿಷ್ಯಕ್ಕೆ ಹೊಸ ಪ್ರಶ್ನೆಗಳನ್ನು ಹುಟ್ಟುಹಾಕುವ ಜ್ಞಾನಯಾತ್ರೆಯೇ ನಿಜವಾದ ಸಂಶೋಧನೆ."
>
> ■ ಡಾ.ಮಹೇಶ ಚಿಂತಾಮಣಿ

ಕಾರ್ಯಕ್ರಮದಲ್ಲಿ ಸಿಬ್ಬಂದಿ ಕಾರ್ಯದರ್ಶಿಗಳಾದ ಡಾ. ಬಂದೇನಮಾಜ್ ಕೊರಬು, ಶ್ರೀಮತಿ ಪುಷ್ಪಾ ಹುಣಸ್ಯಾಳ, ಶ್ರೀಮತಿ ಶಿವಲೀಲಾ, ಡಾ. ಎಸ್.ಎಸ್. ಸಿದ್ದಾಪೂರ, ಡಾ. ಭಜರಂಗಿ ಜಾಧವ, ಶ್ರೀಮತಿ ಸವಿತಾ ಪಾಟೀಲ ಸೇರಿದಂತೆ ಬೋಧಕ ವೃಂದ ಹಾಗೂ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

### ರೈತರ ಹೋರಾಟಕ್ಕೆ ಸಿಕ್ಕ ಫಲ । ಏಕ್ಕಲಮರಡಿ ಏತ ನೀರಾವರಿ ಯೋಜನೆಯ ಪಂಪ್ ವರ್ಕ್ ಪೂರ್ಣ

# ನಿರಾಣಿ ಇಂಜಿನಿಯರಿಂಗ್ ಸಿಬ್ಬಂದಿಗೆ ರೈತರಿಂದ ಸನ್ಮಾನ

■ ಉದಯರಶ್ಮಿ ದಿನಪತ್ರಿಕೆ



ಬಾಗಲಕೋಟೆ (ಜಮಖಂಡಿ): ಸುಮಾರು 13 ವರ್ಷಗಳಿಂದ ಏತ ನೀರಾವರಿ ಯೋಜನೆ ಪೂರ್ಣಗೊಳ್ಳದೆ ರೈತರು ಸಂಕಷ್ಟ ಅನುಭವಿಸುತ್ತಿದ್ದ ಹಿನ್ನೆಲೆಯಲ್ಲಿ ಕಳೆದ ಎರಡು ವಾರಗಳ ಹಿಂದೆ ಚಿಕ್ಕಲಕಿ ಕ್ರಾಸ್‌ನಲ್ಲಿ ರೈತರು ನಡೆಸಿದ ಐತಿಹಾಸಿಕ ಹೋರಾಟಕ್ಕೆ ಕೊನೆಗೂ ಫಲ ದೊರೆತಿದೆ. ಹೋರಾಟದ ವೇಳೆ ನಿರಾಣಿ ಸಕ್ಕರೆ ಕಾರ್ಖಾನೆಯ ವ್ಯವಸ್ಥಾಪಕ ನಿರ್ದೇಶಕರಾದ ಮುರಗೇಶ ನಿರಾಣಿ ಪ್ರತಿಭಟನಾ ಸ್ಥಳಕ್ಕೆ ಆಗಮಿಸಿ ಬಾಕಿ ಉಳಿದಿದ್ದ ಪಂಪ್ ವರ್ಕ್ ಕಾಮಗಾರಿಯನ್ನು ಶೀಘ್ರ ಪೂರ್ಣಗೊಳಿಸುವ ಭರವಸೆ ನೀಡಿದ್ದರು. ನೀಡಿದ ಭರವಸೆಯಂತೆ ಕಾಮಗಾರಿಯನ್ನು ನಿಗದಿತ ಅವಧಿಯೊಳಗೆ ಯಶಸ್ವಿಯಾಗಿ ಪೂರ್ಣಗೊಳಿಸಿರುವ ಹಿನ್ನೆಲೆಯಲ್ಲಿ ನಿರಾಣಿ ಸಕ್ಕರೆ ಕಾರ್ಖಾನೆಯ ತಾಂತ್ರಿಕ ವಿಭಾಗದ ಇಂಜಿನಿಯರಿಂಗ್ ಸಿಬ್ಬಂದಿಯನ್ನು ಏಕ್ಕಲಮರಡಿ ಏತ ನೀರಾವರಿ ಹೋರಾಟ ಸಮಿತಿ ಹಾಗೂ ಸುತ್ತಮುತ್ತಲಿನ ಗ್ರಾಮಗಳ ರೈತರು ಆತ್ಮೀಯವಾಗಿ ಸನ್ಮಾನಿಸಿ ಅಭಿನಂದಿಸಿದರು.

ಸನ್ಮಾನ ಸಮಾರಂಭದಲ್ಲಿ ಮಾತನಾಡಿದ ರೈತ ಮುಖಂಡರು, ಇಂಜಿನಿಯರಿಂಗ್ ಸಿಬ್ಬಂದಿ ಅತ್ಯಂತ ಗುಣಮಟ್ಟದಿಂದ, ಸಮಯಪ್ರಜ್ಞೆಯಿಂದ ಹಾಗೂ ಕಾರ್ಯನಿಷ್ಠೆಯಿಂದ ಕಾಮಗಾರಿ ಪೂರ್ಣಗೊಳಿಸಿರುವುದು ಶ್ಲಾಘನೀಯ. ಹಲವು ವರ್ಷಗಳಿಂದ ಬಾಕಿ ಉಳಿದಿದ್ದ ಪಂಪ್ ವರ್ಕ್ ಪೂರ್ಣಗೊಂಡಿರುವುದು ರೈತರಲ್ಲಿ ಹೊಸ ಭರವಸೆ ಮೂಡಿಸಿದ್ದು, ಯೋಜನೆಯ ಮೂಲಕ ನೀರಾವರಿ ಸೌಲಭ್ಯ ಮತ್ತಷ್ಟು ಬಲಗೊಳ್ಳುವ ನಿರೀಕ್ಷೆ ಇದೆ ಎಂದು ಹೇಳಿದರು. ಗಮನಾರ್ಹವಾಗಿ, ಇದೇ ಯೋಜನೆ ಪೂರ್ಣಗೊಳಿಸುವಂತೆ ಒತ್ತಾಯಿಸಿ ರೈತರು ಕಳೆದ ಎರಡು ವಾರಗಳ ಹಿಂದೆ ಜಮಖಂಡಿ ತಾಲೂಕಿನ ಚಿಕ್ಕಲಕಿ ಕ್ರಾಸ್‌ನಲ್ಲಿ ಬೃಹತ್ ಪ್ರತಿಭಟನೆ ನಡೆಸಿದ್ದರು. ವಿಜಯಪುರ ಧಾರವಾಡ ರಾಷ್ಟ್ರೀಯ ಹೆದ್ದಾರಿ ತಡೆದು, ಅರೆಬೆತ್ತಲೆ ಮೆರವಣಿಗೆ, ಉರುಳು ಸೇವೆ, ರಸ್ತೆ ಮಧ್ಯೆಯೇ ಒಲೆ ಹಚ್ಚಿ ಅಡುಗೆ ಮಾಡಿ ಊಟ ಮಾಡುವ ಮೂಲಕ ಸರ್ಕಾರ ಮತ್ತು ಸಂಬಂಧಿತ ಅಧಿಕಾರಿಗಳ ನಿರ್ಲಕ್ಷ್ಯದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದರು. ಸುಮಾರು 13 ವರ್ಷಗಳಾದರೂ ಯೋಜನೆಯ ನೀರು ರೈತರ ಜಮೀನುಗಳಿಗೆ ತಲುಪದಿರುವುದನ್ನು ಖಂಡಿಸಿ ನಡೆದ ಈ ಹೋರಾಟ ರಾಜ್ಯದ ಗಮನ ಸೆಳೆದಿತ್ತು.

ಪ್ರತಿಭಟನೆಯ ತೀವ್ರತೆಯನ್ನು ಅರಿತು ಹೋರಾಟದ ಸ್ಥಳಕ್ಕೆ ಆಗಮಿಸಿದ್ದ ಮುರಗೇಶ ನಿರಾಣಿ ಅವರು ರೈತರೊಂದಿಗೆ ಮಾತುಕತೆ ನಡೆಸಿ ಬಾಕಿ ಉಳಿದಿದ್ದ ಪಂಪ್ ವರ್ಕ್ ಕಾಮಗಾರಿಯನ್ನು ತಕ್ಷಣ ಪೂರ್ಣಗೊಳಿಸುವುದಾಗಿ ಭರವಸೆ ನೀಡಿದ್ದರು. ಅದರಂತೆ ಈಗ ಕಾಮಗಾರಿ ಯಶಸ್ವಿಯಾಗಿ ಪೂರ್ಣಗೊಂಡಿದ್ದು, ರೈತರು ತಮ್ಮ ಮಾತು ಉಳಿಸಿಕೊಂಡ ನಿರಾಣಿ ಸಕ್ಕರೆ ಕಾರ್ಖಾನೆಯ ಆಡಳಿತ ಮಂಡಳಿ ಹಾಗೂ ಇಂಜಿನಿಯರಿಂಗ್ ಸಿಬ್ಬಂದಿಗೆ ಕೃತಜ್ಞತೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಹಿರಿಯರಾದ ಪಾಂಡು ಮಾಡಿಕ, ಸುರೇಶ್ ಜಾಂಬರೆ, ಅಪ್ಪಾಸಿ ಜಾದವ, ಸಿದ್ರಾಯ ಸನಸಿದ್ದ, ಸಂಜು ಬೋಸ್ಲೆ ಹಾಗೂ ಯುವ ಮುಖಂಡರಾದ ಈಶ್ವರ ನ್ಯಾಮಗೌಡ, ಹಣಮಂತ ಮರಡಿ, ಗೋಸಿರ ಕೊಣ್ಣೂರ, ಮಾದೇವ ಉಪ್ಪಲದಿನ್ನಿ ಸೇರಿದಂತೆ ವಿವಿಧ ಗ್ರಾಮಗಳ ರೈತರು ಉಪಸ್ಥಿತರಿದ್ದರು. ಇಂಜಿನಿಯರಿಂಗ್ ಸಿಬ್ಬಂದಿಗೆ ಶಾಲು ಹೊದಿಸಿ, ಫಲಪುಷ್ಪ ನೀಡಿ ಗೌರವಿಸಿ ಅಭಿನಂದಿಸಿದರು.ರೈತರ ಸಂಘಟಿತ ಹೋರಾಟ, ನಿರಾಣಿ ಆಡಳಿತ ಮಂಡಳಿಯ ಸ್ಪಂದನೆ ಹಾಗೂ ತಾಂತ್ರಿಕ ಸಿಬ್ಬಂದಿಯ ಕಾರ್ಯಕ್ಷಮತೆಯಿಂದ ಯೋಜನೆಯ ಪ್ರಮುಖ ಕಾಮಗಾರಿ ಪೂರ್ಣಗೊಂಡಿರುವುದು ರೈತ ಸಮುದಾಯದಲ್ಲಿ ಸಂತಸ ಮೂಡಿಸಿದ್ದು, ಈ ಘಟನೆ ರೈತರು ಮತ್ತು ನಿರಾಣಿ ಸಕ್ಕರೆ ಕಾರ್ಖಾನೆಯ ನಡುವಿನ ಪರಸ್ಪರ ವಿಶ್ವಾಸ, ಸಹಕಾರ ಮತ್ತು ಬಾಂಧವ್ಯಕ್ಕೆ ಉತ್ತಮ ಉದಾಹರಣೆಯಾಗಿದೆ.

### ಬಿ.ಎಲ್.ಡಿ.ಇ ಸಂಸ್ಥೆಯ ಎಸ್. ಬಿ. ಕಲಾ ಮತ್ತು ಕೆ.ಸಿ.ಪಿ ವಿಜ್ಞಾನ ಮಹಾವಿದ್ಯಾಲಯದಲ್ಲಿ 'ಪತ್ರಿಕಾ ದಿನಾಚರಣೆ'

# ಹಿರಿಯ ಪತ್ರಕರ್ತರ ಕೊಡುಗೆ ಅನನ್ಯ :ಎಂ.ಎಲ್.ಜಮಾದಾರ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕನ್ನಡ ಪತ್ರಿಕೋದ್ಯಮವು ಹೆಮ್ಮರವಾಗಿ ಬೆಳೆಯಲು ನಾಡಿನ ಹಿರಿಯ ಪರ್ತಕರ್ತರ ಕೊಡುಗೆ ಅಪಾರವಾಗಿದ್ದು, ಅವರ ಸನ್ಮಾರ್ಗದಲ್ಲಿ ನಾವಿಂದು ನಡೆಯಬೇಕಾಗಿದೆ ಎಂದು ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ಮುಖ್ಯಸ್ಥ ಎಂ. ಎಲ್.ಜಮಾದಾರ ಹೇಳಿದರು.

ನಗರದ ಬಿ.ಎಲ್.ಡಿ.ಇ ಸಂಸ್ಥೆಯ ಎಸ್. ಬಿ. ಕಲಾ ಮತ್ತು ಕೆ.ಸಿ.ಪಿ ವಿಜ್ಞಾನ ಮಹಾವಿದ್ಯಾಲಯದಲ್ಲಿ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ಆಶ್ರಯದಲಿ ಹಮ್ಮಿಕೊಂಡ 'ಪತ್ರಿಕಾ ದಿನಾಚರಣೆ' ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕನ್ನಡ ಪ್ರತಿಕಾ ದಿನಾಚರಣೆ ಪ್ರತಿ ವರ್ಷ ಜುಲೈ 1 ರಂದು ಪತ್ರಿಕಾ ದಿನಾಚರಣೆ ಆಚರಿಸಲಾಗುತ್ತದೆ. ಕನ್ನಡದ ಮೊಟ್ಟಮೊದಲ ದಿನ ಪತ್ರಿಕೆ ಮಂಗಳೂರು ಸಮಾಚಾರ ಜುಲೈ 1 1843 ರಂದು ಪ್ರಾರಂಭಿಸಲಾಯಿತು. ಅದರ ಹಿನ್ನೆಲೆ ಪ್ರತಿ ವರ್ಷ ಜುಲೈ 1 ರಂದು ಪತ್ರಿಕಾ ದಿನಾಚರಣೆ ಆಚ–ರಿಸಲಾಗುತ್ತದೆ ಎಂದರು.

ಕನ್ನಡ ಪತ್ರಿಕೋಧ್ಯಮವು ಡವಿಜಿ. ಪಾಟೀಲ ಪುಟ್ಟಪ್ಪ, ಮೊಹರೆ ಹನುಮಂತರಾಯ ಇಂತಹ ಹಲವಾರು ವ್ಯಕ್ತಿಗಳಿಂದ ಬೃಹತ್ತಾಗಿ ಬೆಳೆದು ನಿಂತಿದೆ. ಪತ್ರಿಕೋದ್ಯಮ ಕ್ಷೇತ್ರದಲ್ಲಿ ಸಾಧಿಸಿದ ಪರ್ತಕರ್ತರನ್ನು ಗುರುತಿಸಿ ಗೌರವಿಸಲಾಗುತ್ತದೆ. ಹಿರಿಯ ಪತ್ರಕರ್ತರು ಕಾರ್ಯವೈಖರಿ ಇಂದಿನ ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಬೋಧಕರು, ಪತ್ರಿಕೋದ್ಯಮದ ವಿದ್ಯಾರ್ಥಿ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR